# ಕುವೆಂಪು ವಿಶ್ವವಿದ್ಯಾಲಯ

# ವಿಶೇಷ ಸಿಂಡಿಕೇಟ್ ಸಭೆಯ ನಡಾವಳಿಗಳು

## ಸಭಾ ದಿನಾಂಕ : 02-06-2022

ಪ್ರಾಧಿಕಾರಗಳ ವಿಭಾಗ

ಜ್ಞಾನಸಹ್ಯಾದ್ರಿ, ಶಂಕರಘಟ್ಟ – 577 451
ಶಿವಮೊಗ್ಗ ಜಿಲ್ಲೆ.

ಫ್ಯಾಕ್ಸ್: 08282-256262
ಇ-ಮೇಲ್: drsyndicateku@gmail.com

☎ 08282-256148 (ಪ್ರಾಧಿಕಾರಗಳ ವಿಭಾಗ)
ವೆಬ್‌ಸೈಟ್: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ, ಶಂಕರಘಟ್ಟ- 577 451

ಸಂಖ್ಯೆ: ಕುವಿ:ಯುಎಟಿ-1:ಸಿಂ-6:22: 1೩೧ :2022-23 ದಿನಾಂಕ:23-06-2022

ಮಾನ್ಯರೆ,

ವಿಷಯ: ದಿನಾಂಕ:02-06-2022, 08-06-2022 ಹಾಗೂ 15-06-2022 ರಂದು ನಡೆದ ಸಿಂಡಿಕೇಟ್‌ಯ ಸಭೆಯ ನಡಾವಳಿಗಳು.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ - 2000ರ ಪ್ರಕರಣ - 29(w)ರ ಪ್ರಕಾರ ರಚಿಸಲಾಗಿರುವ/ ಅನುಸರಿಸಲಾಗುತ್ತಿರುವ ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು- ಅಧ್ಯಾಯ- III ರ ಪ್ರಕರಣ- 16 ರನ್ವಯ ದಿನಾಂಕ:02-06-2022 ಹಾಗೂ ದಿನಾಂಕ:08-06-2022 ರಂದು ನಡೆದ ಸಿಂಡಿಕೇಟ್ ವಿಶೇಷ ಸಭೆಯ ಮತ್ತು ದಿನಾಂಕ:15-06-2022 ರಂದು ನಡೆದ ಸಿಂಡಿಕೇಟ್ ಅಸಾಮಾನ್ಯ ಸಭೆಯ ನಡಾವಳಿಗಳನ್ನು ಈ ಮೂಲಕ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು - ಅಧ್ಯಾಯ-IIIರ ಪ್ರಕರಣ - 16 ರ ಪ್ರಕಾರ ಸದರಿ ನಡಾವಳಿಗಳು ತಲುಪಿದ 07 ದಿನಗಳೊಳಗೆ ತಮ್ಮಿಂದ ನಡಾವಳಿಗಳ ದಾಖಲಾತಿಯ ಬಗ್ಗೆ ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ ನಡಾವಳಿಗಳ ದಾಖಲಾತಿಯು ಸರಿಯಾಗಿದೆಯೆಂದು ಭಾವಿಸಲಾಗುವುದು.

ವಿ.ಸೂ.: ಸದರಿ ನಡಾವಳಿಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಯಥಾವತ್ತಾಗಿ ಪ್ರಕಟಿಸಲಾಗಿದೆ.

ತಮ್ಮ ವಿಶ್ವಾಸಿ,

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.

ಗೆ,

ಮಾನ್ಯ ಸಿಂಡಿಕೇಟ್ ಸದಸ್ಯರುಗಳಿಗೆ.

ಪ್ರತಿಗಳು:

1) ಮಾನ್ಯ ರಾಜ್ಯಪಾಲರ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರದ ಸಚಿವಾಲಯಗಳು ಬಹುಮಹಡಿಗಳ ಕಟ್ಟಡ, ಡಾ.ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು.
3) ಆಯುಕ್ತರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, ನೃಪತುಂಗ ರಸ್ತೆ, ಬೆಂಗಳೂರು.
4) ಕುಲಸಚಿವರು(ಪರೀಕ್ಷಾಂಗ) ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
5) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
6) ನಿಕಾಯಗಳ ಡೀನರುಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
7) ಗ್ರಂಥಪಾಲಕರು, ವಿಶ್ವವಿದ್ಯಾಲಯ ಗ್ರಂಥಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
8) ನಿರ್ದೇಶಕರು, ಐ.ಕ್ಯೂ.ಎ.ಸಿ./ಪಿ.ಎಂ.ಇ/ ಸಿ.ಡಿ.ಸಿ/ ಶಾರೀರಿಕ ಶಿಕ್ಷಣ/ ವಿದ್ಯಾರ್ಥಿ ಕ್ಷೇಮಪಾಲನ/ ಪ್ರಸಾರಾಂಗ/ ದೂರ ಶಿಕ್ಷಣ ನಿರ್ದೇಶನಾಲಯ ವಿಭಾಗ, ಮಹಿಳಾ ಅಧ್ಯಯನ ಕೇಂದ್ರ, ಯು.ಸಿ.ಸಿ.ಎಫ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
9) ನಿರ್ದೇಶಕರು / ಜ್ಯೂನಿಯರ್ ಕಂಪ್ಯೂಟರ್ ಪ್ರೋಗ್ರಾಮರ್, ಯು.ಸಿ.ಸಿ.ಎಫ್. ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ - ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಸಿಂಡಿಕೇಟ್ ಸಭೆಯ ನಡಾವಳಿಯನ್ನು ಸೇರ್ಪಡಿಸುವುದು.
10) ಎಲ್ಲಾ ಅಧ್ಯಕ್ಷರು, ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ಶಿವಮೊಗ್ಗ/ ಕಡೂರು/ ಚಿಕ್ಕಮಗಳೂರು.
11) ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರುಗಳು/ ಶಾಖಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ಶಿವಮೊಗ್ಗ/ಕಡೂರು.
12) ಪ್ರಾಂಶುಪಾಲರು, ಸಹ್ಯಾದ್ರಿ ಕಲಾ ಕಾಲೇಜು / ಸಹ್ಯಾದ್ರಿ ವಿಜ್ಞಾನ ಕಾಲೇಜು/ ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣೆ ಕಾಲೇಜು, ಶಿವಮೊಗ್ಗ.
13) ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಬಿ.ಹೆಚ್ ರಸ್ತೆ ಕಡೂರು.
14) ಸಂಯೋಜನಾಧಿಕಾರಿಗಳು, ಸ್ನಾತಕೋತ್ತರ ಕೇಂದ್ರ, ಐ.ಡಿ.ಎಸ್.ಜಿ ಕಾಲೇಜು ಕಟ್ಟಡ, ಕುವೆಂಪು ವಿಶ್ವವಿದ್ಯಾಲಯ, ಚಿಕ್ಕಮಗಳೂರು.
15) ಸಂಚಾಲಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಘಟಕ/ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಘಟಕ, ವಿದ್ಯಾರ್ಥಿಗಳ ಉತ್ತೇಜನ ಸೇವಾ ಕೇಂದ್ರ, ವಿದ್ಯಾರ್ಥಿಗಳ ಸೌಲಭ್ಯ ಸಮುಚ್ಛಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
16) ಕಾರ್ಯಪಾಲಕ ಅಭಿಯಂತರರು, ಇಂಜಿನಿಯರಿಂಗ್ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
17) ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
18) ಆಪ್ತಕಾರ್ಯಾಲಯ ಕುಲಪತಿಗಳು: ಕುಲಸಚಿವರು: ಕುಲಸಚಿವರು(ಮೌಲ್ಯಮಾಪನ):ಹಣಕಾಸು ಅಧಿಕಾರಿಗಳು. ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
19) ಕಛೇರಿ ಪ್ರತಿ / ರಕ್ಷಣಾ ಕಡತ.

PROCEEDINGS COVE LETTER-23-06-20222

# ಕುವೆಂಪು ವಿಶ್ವವಿದ್ಯಾಲಯ

ದಿನಾಂಕ:02-06-2022 ರಂದು ಮಂಗಳವಾರ ಪೂರ್ವಾಹ್ನ :11.00 ಗಂಟೆಗೆ "ಶತಮಾನೋತ್ಸವ ಭವನದ ಮೂರನೇ ಮಹಡಿಯ ಸಿಂಡಿಕೇಟ್ ಸಭಾಂಗಣ" ಇಲ್ಲಿ ನಡೆದ "ವಿಶೇಷ ಸಿಂಡಿಕೇಟ್ ಸಭೆ"ಯ ನಡಾವಳಿಗಳು.

**ಹಾಜರಾದ ಸದಸ್ಯರು:**

| | | |
|---|---|---|
| 1. | ಪ್ರೊ. ಬಿ.ಪಿ. ವೀರಭದ್ರಪ್ಪ, ಕುಲಪತಿಗಳು | ಅಧ್ಯಕ್ಷರು |
| 2. | ಶ್ರೀಮತಿ ಅನುರಾಧ ಜಿ. ಕೆ.ಎ.ಎಸ್.(ಸೂಪರ್ ಟೈಮ್ ಸ್ಕೇಲ್) ಕುಲಸಚಿವರು | ಸದಸ್ಯ ಕಾರ್ಯದರ್ಶಿಗಳು |
| 3. | ಪ್ರೊ. ನವೀನ್‌ಕುಮಾರ್ ಎಸ್.ಕೆ., ಕುಲಸಚಿವರು(ಮೌಲ್ಯಮಾಪನ) | ಸದಸ್ಯರು |
| 4. | ಡಾ. ಅಶೋಕ್ ಡಿ. ರೇವಣ್‌ಕರ್, ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಪ್ರತಿನಿಧಿ | ಸದಸ್ಯರು |
| 5. | ಶ್ರೀ ಬಿ. ನಿರಂಜನ ಮೂರ್ತಿ | ಸದಸ್ಯರು |
| 6. | ಶ್ರೀ ಹೆಚ್. ಬಿ. ರಮೇಶಬಾಬು | ಸದಸ್ಯರು |
| 7. | ಶ್ರೀ ಬಳ್ಳೇಕೆರೆ ಸಂತೋಷ್ | ಸದಸ್ಯರು |
| 8. | ಶ್ರೀಮತಿ ಕಿರಣ್ ರವೀಂದ್ರ ದೇಸಾಯಿ | ಸದಸ್ಯರು |
| 9. | ಶ್ರೀ ಧರ್ಮಪ್ರಸಾದ್ ಜಿ. | ಸದಸ್ಯರು |
| 10. | ಶ್ರೀ ಎಸ್. ಆರ್. ನಾಗರಾಜ್ | ಸದಸ್ಯರು |
| 11. | ಪ್ರೊ. ರಿಯಾಜ್ ಮಹಮೂದ್, ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ | ಸದಸ್ಯರು |
| 12. | ಶ್ರೀಮತಿ ಭಾರತಿ, ಪ್ರಾಂಶುಪಾಲರು | ಸದಸ್ಯರು |
| 13. | ಶ್ರೀ ನಟೇಶ್ ಎಸ್. ಎಂ., ಪ್ರಾಂಶುಪಾಲರು | ಸದಸ್ಯರು |
| 14. | ಡಾ. ಧನಂಜಯ ಬಿ.ಜೆ., ಪ್ರಾಂಶುಪಾಲರು | ಸದಸ್ಯರು |

**ಗೈರುಹಾಜರಾದ ಸದಸ್ಯರು:**

| | | |
|---|---|---|
| 1. | ಶ್ರೀ ರಾಮಲಿಂಗಪ್ಪ ಹೆಚ್. | ಸದಸ್ಯರು |
| 2. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 3. | ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 4. | ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 5. | ಆಯುಕ್ತರು, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು. | ಸದಸ್ಯರು |

**ಪೂರ್ವಾನುಮತಿಯೊಂದಿಗೆ ಗೈರು ಹಾಜರಾದ ಸದಸ್ಯರು:**

ಯಾರು ಇರುವುದಿಲ್ಲ.

**ಪ್ರಸ್ತಾವನೆ:** ಪ್ರಾರಂಭದಲ್ಲಿ ಸಭೆಗೆ ಆಗಮಿಸಿದ ಸದಸ್ಯರುಗಳೆಲ್ಲರಿಗೂ ಮಾನ್ಯ ಕುಲಸಚಿವರು ಆತ್ಮೀಯವಾಗಿ ಸ್ವಾಗತ ಕೋರಿದರು. ಆನ್‌ಲೈನ್ ಮೂಲಕ ಭಾಗವಹಿಸಿದ ಸದಸ್ಯರಾದ ಶ್ರೀ ಬಿ. ನಿರಂಜನ ಮೂರ್ತಿ ಹಾಗೂ ಶ್ರೀ ಎನ್. ಆರ್. ಮಂಜುನಾಥರವರಿಗೆ ಸ್ವಾಗತ ಕೋರಿದರು, ವಿಶೇಷ ಸಭೆಯನ್ನು ಘಟಿಕೋತ್ಸವದ ನಿಮಿತ್ತ ಅತಿ ತುರ್ತಾಗಿ ಕರೆಯಲಾಗಿದೆ ಎಂದು ಹೇಳಿದರು. ನಂತರ ಅಫಘಾತದಲ್ಲಿ ದುರ್ಮರಣ ಹೊಂದಿದ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಾದ ಶ್ರೀ ಉತ್ತಮ್‌ಕುಮಾರ, ಎಂ.ಸಿ.ಎ./ಕಂಪ್ಯೂಟರ್ ಸೈನ್ಸ್ ವಿಭಾಗ ಹಾಗೂ ಶ್ರೀ ಮನೋಜ್ ಎಂ.ಕಾಂ. ವಿಭಾಗ ಇವರ ಸ್ಮರಣಾರ್ಥ ಸಭೆಯಲ್ಲಿ ಒಂದು ನಿಮಿಷ ಮೌನ ಆಚರಿಸಲಾಯಿತು.

ಮುಂದುವರೆದು, ಮಾನ್ಯ ಕುಲಪತಿಗಳು ಪ್ರಾಸ್ತಾವಿಕವಾಗಿ ಮಾತನಾಡಿ ವಿಶ್ವವಿದ್ಯಾಲಯದ 31 ಮತ್ತು 32ನೇ ವಾರ್ಷಿಕ ಘಟಿಕೋತ್ಸವವನ್ನು ದಿನಾಂಕ:16-06-2022ರಂದು ನಡೆಸಲು ಗೌರವಾನ್ವಿತ ಕುಲಾಧಿಪತಿಗಳು ಒಪ್ಪಿಗೆ ನೀಡಿರುತ್ತಾರೆ ಎಂದು ತಿಳಿಸಿ ಘಟಿಕೋತ್ಸವದ ನಿಮಿತ್ತ ದಿನಾಂಕ: 14-06-2022 ರಂದು ಸುದ್ದಿಗೋಷ್ಠಿ ಹಾಗೂ ದಿನಾಂಕ: 15-06-2022ರಂದು ಸಿಂಡಿಕೇಟ್ ಹಾಗೂ ವಿದ್ಯಾವಿಷಯಕ ಪರಿಷತ್ ಸಭೆ ನಡೆಸಲಾಗುವುದು ಎಂದು ಹೇಳಿದರು. ಗೌರವಾನ್ವಿತ ಕುಲಾಧಿಪತಿಗಳು

ದಿನಾಂಕ:15-06-2022ರಂದು ವಿಶ್ವವಿದ್ಯಾಲಯಕ್ಕೆ ಭೇಟಿ ನೀಡುತ್ತಾರೆ. ಘಟಿಕೋತ್ಸವದಲ್ಲಿ ಒಟ್ಟು ಸುಮಾರು 282 ಸ್ವರ್ಣ ಪದಕಗಳನ್ನು ಹಾಗೂ 17 ನಗದು ಬಹುಮಾನಗಳನ್ನು ಪ್ರದಾನ ಮಾಡಬೇಕಾಗಿರುತ್ತದೆ. ಹಾಗೂ ಸಾಧನೆ ಮಾಡಿದ ಗಣ್ಯರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಗುತ್ತದೆ ಎಂದರು.

ನಾವೆಲ್ಲರೂ ಸೇರಿ ಘನತೆವೆತ್ತ ಕುಲಾಧಿಪತಿಗಳು, ಉನ್ನತ ಶಿಕ್ಷಣ ಸಚಿವರು ಹಾಗೂ ಮುಖ್ಯ ಅತಿಥಿಗಳಾದ ಡಾ॥ ಶ್ರೀಮತಿ ಶ್ರೀದೇವಿ ಅನ್ನಪೂರ್ಣ ಸಿಂಗ್ (CFTRI) – ಇವರನ್ನು ಸ್ವಾಗತಿಸೋಣ. ಎಲ್ಲರೂ ಒಟ್ಟಾಗಿ ಘಟಿಕೋತ್ಸವವು ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಬೇಕಾಗಿದೆ. ಸರ್ಕಾರವು ಹೊಸ ಶಿಕ್ಷಣ ನೀತಿಯನ್ನು ಜಾರಿಗೊಳಿಸಿದ್ದು, ಉನ್ನತ ಶಿಕ್ಷಣದಲ್ಲಿ ಮಹತ್ವದ ಕ್ರಾಂತಿಯಾಗಿದೆ. ಜೂನ್ ಎರಡನೇ ವಾರದಲ್ಲಿ ಕಾಮನ್ ವೆಲ್ತ್ ವಿಶ್ವವಿದ್ಯಾಲಯಗಳ ಸಭೆ ನಡೆಯಲಿದೆ. ಅಮೃತ ಮಹೋತ್ಸವದ ಹಿನ್ನಲೆಯಲ್ಲಿ ಈಸೂರಿನಲ್ಲಿ ಕಾರ್ಯಕ್ರಮ ಮಾಡಬೇಕಾಗಿದ್ದು ಮಾನ್ಯ ಮುಖ್ಯ ಮಂತ್ರಿಗಳು, ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಮಂತ್ರಿಗಳನ್ನು ಈ ಕಾರ್ಯಕ್ರಮಕ್ಕೆ ಕರೆಯಬೇಕು. ಹದಿನೇಳನೇ ಕನ್ನಡ ವಿಜ್ಞಾನ ಕಾಂಗ್ರೆಸ್ ಸಮ್ಮೇಳನವನ್ನು ಈ ವರ್ಷ ಕುವೆಂಪು ವಿಶ್ವವಿದ್ಯಾಲಯವು ಆಯೋಜಿಸಬೇಕಾಗಿದೆ ಕಳೆದ ವರ್ಷ ಮಂಗಳೂರು ವಿಶ್ವವಿದ್ಯಾಲಯದಿಂದ ಸದರಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು ಎಂದು ಹೇಳಿದರು.

ಕುಲಸಚಿವರು ಮಾತನಾಡಿ ಸದರಿ ಸಮ್ಮೇಳನದಿಂದ ವಿಶ್ವವಿದ್ಯಾಲಯಕ್ಕೆ ಯಾವುದೇ ಆರ್ಥಿಕ ಹೊರೆಯಾಗದಿದ್ದರೆ ಆಯೋಜಿಸಬಹುದು ಎಂದು ಹೇಳಿದರು.

ಸದಸ್ಯರಾದ ಶ್ರೀ ಧರ್ಮಪ್ರಸಾದರವರು ಮಾತನಾಡಿ ಒಂದು ವರ್ಷದಲ್ಲಿ ಕನಿಷ್ಠ ಎಂಟು ಸಿಂಡಿಕೇಟ್ ಸಭೆಗಳನ್ನು ನಡೆಸಬೇಕಾಗಿದ್ದು ಒಂದು ಸಭೆಯಿಂದ ಇನ್ನೊಂದು ಸಭೆಯ ನಡುವೆ 45 ದಿನಗಳ ಕಾಲಾವಕಾಶ ತೆಗೆದುಕೊಳ್ಳಬಹುದಾಗಿರುತ್ತದೆ, ಆದರೆ ಇಲ್ಲಿ ಸದರಿ ನಿಯಮವನ್ನು ಪಾಲಿಸುತ್ತಿಲ್ಲ. ಅಲ್ಲದೆ ಸಭೆಯಲ್ಲಿ ತೆಗೆದುಕೊಂಡ ನಿರ್ಣಯಗಳು ಜಾರಿಯಾಗುವ ಸಂದರ್ಭದಲ್ಲಿ ಕೆಳಹಂತದಲ್ಲಿ ಮತ್ತೆ ಬದಲಾವಣೆಯಾಗುತ್ತವೆ. ಸಭೆಯಲ್ಲಿ ನಿರ್ಣಯ ತೆಗೆದುಕೊಳ್ಳುವ ಹಂತದಲ್ಲಿಯೇ ಸಂಬಂಧಪಟ್ಟವರನ್ನು ಕರೆಸಿ ಅವರಿಂದ ಮಾಹಿತಿ ಪಡೆದು ಸರಿಯಾದ ನಿರ್ಣಯ ತೆಗೆದುಕೊಳ್ಳಬಹುದು ಒಟ್ಟಿನಲ್ಲಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯಗಳು ಜಾರಿಯಾಗಬೇಕು ಎಂದು ಹೇಳಿದರು.

ಮುಂದುವರೆದು, ವಿಶ್ವವಿದ್ಯಾಲಯದಲ್ಲಿ ಚರ್ಚಿಸಲು ಬಹಳಷ್ಟು ವಿಷಯಗಳಿವೆ ಮಾನ್ಯ ಉಚ್ಚನ್ಯಾಯಾಲಯದ ತೀರ್ಪು ಬಂದಿದ್ದು ದೂರ ಶಿಕ್ಷಣದ ದ್ವಿತೀಯ ಮತ್ತು ತೃತೀಯ ವರ್ಷದ ವಿದ್ಯಾರ್ಥಿಗಳಿಗೆ ಪರೀಕ್ಷೆ ಮಾಡಬೇಕು, ವಿಶ್ವವಿದ್ಯಾಲಯ ಹಣಕಾಸು ಸ್ಥಿತಿ ಹದಗೆಟ್ಟಿದ್ದು ಈ ಹಂತಕ್ಕೆ ಬರಲು ಕಾರಣವೇನು ಹಾಗೂ ಹಣಕಾಸು ಅಧಿಕಾರಿಗಳು ಇದನ್ನು ಸುಧಾರಿಸಲು ಏನು ಕ್ರಮ ತೆಗೆದುಕೊಂಡಿದ್ದಾರೆ, ವಿಶ್ವವಿದ್ಯಾಲಯಕ್ಕೆ ಬರಬೇಕಾದ ಬಾಕಿ ವಸೂಲಾತಿ ಮುಂತಾದ ಹಲವು ವಿಷಯಗಳನ್ನು ಚರ್ಚಿಸಬೇಕಾಗಿದ್ದು, ತಿಂಗಳಿಗೆ ಒಂದು ಸಿಂಡಿಕೇಟ್ ಸಭೆಯನ್ನು ಆಯೋಜಿಸಿದರೆ ಒಳ್ಳೆಯದು ಎಂದರು.

ಸದಸ್ಯರಾದ ಶ್ರೀ ರಮೇಶಬಾಬುರವರು ಮಾತನಾಡಿ ವಿಶ್ವವಿದ್ಯಾಲಯಕ್ಕೆ ಬರಬೇಕಾದ ಬಾಕಿ ಹಣ ಬಂದರೆ ಬಹಳಷ್ಟು ಸಮಸ್ಯೆಗಳು ಬಗೆಹರಿಯುತ್ತವೆ. ವಿಶ್ವವಿದ್ಯಾಲಯದ / ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಭೆಯು ತೆಗೆದುಕೊಂಡಿರುವ ನಿರ್ಣಯಗಳು ಜಾರಿಯಾಗುತ್ತಿಲ್ಲ ಎಂದು ಹೇಳಿದರು.

ಸಿಂಡಿಕೇಟ್ ಸಭೆಯ ನಡಾವಳಿಗಳು ಬಹಳ ವಿಳಂಬವಾಗುತ್ತಿದ್ದು, ನಡಾವಳಿಗಳನ್ನು ಶೀಘ್ರವಾಗಿ ನೀಡಬೇಕೆಂದು ಎಲ್ಲಾ ಸದಸ್ಯರು ಆಗ್ರಹಿಸಿದರು. ಕುಲಸಚಿವರು ಮಾತನಾಡಿ ಕೆಲಸದ ಒತ್ತಡದಿಂದ ವಿಳಂಬವಾಗಿರಬಹುದು ಎಂದು ಹೇಳಿದರು.

ಸದಸ್ಯರಾದ ಶ್ರೀ ಬಳ್ಳೇಕೆರೆ ಸಂತೋಷ್‌ರವರು ಮಾತನಾಡಿ ಪ್ರತಿ ತಿಂಗಳು ಸಭೆ ನಡೆಸಿದರೆ ಕಾರ್ಯಸೂಚಿಯು ಕಡಿಮೆ ಇರುತ್ತದೆ, ನಡಾವಳಿಗಳನ್ನು ಶೀಘ್ರವಾಗಿ ನೀಡಬಹುದು ಎಂದರು. ಇದಕ್ಕೆ ಎಲ್ಲಾ ಸದಸ್ಯರು ಸಹಮತ ವ್ಯಕ್ತಪಡಿಸಿದರು.

ನಿರ್ಣಯ: ಚರ್ಚೆಯ ನಂತರ ಒಂದು ಸಭೆಯಿಂದ ಇನ್ನೊಂದು ಸಭೆಯ ನಡುವಿನ ಅಂತರ 45 ದಿನಗಳಿಗೆ ಮೀರದಂತೆ ನೋಡಿಕೊಳ್ಳಲು ನಿರ್ಣಯಿಸಲಾಯಿತು ಹಾಗೂ ಸಭೆಯ ನಡಾವಳಿಗಳು ಸಭೆ ನಡೆದ ನಂತರದ 15(ಹದಿನೈದು) ಕರ್ತವ್ಯದ ದಿನಗಳೊಳಗೆ ಆಗಬೇಕೆಂದು ತಿರ್ಮಾನಿಸಲಾಯಿತು.

## ಪ್ರಾಧಿಕಾರಗಳ ವಿಭಾಗ

**2022-ಸಿಂ-4.01:** ದಿನಾಂಕ:16-06-2022 ರಂದು ನಡೆಯಲಿರುವ ಕುವೆಂಪು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ 32ನೇ ವಾರ್ಷಿಕ ಘಟಿಕೋತ್ಸವಕ್ಕೆ ಸಂಬಂಧಿಸಿದಂತೆ ಗೌರವ ಡಾಕ್ಟರೇಟ್ ಪ್ರದಾನ ಮಾಡುವ ಬಗ್ಗೆ.

ನಿರ್ಣಯ: ಚರ್ಚೆಯ ನಂತರ ದಿನಾಂಕ:16-06-2022 ರಂದು ನಡೆಯಲಿರುವ ಕುವೆಂಪು ವಿಶ್ವವಿದ್ಯಾಲಯದ 32ನೇ ವಾರ್ಷಿಕ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ಪ್ರಧಾನ ಮಾಡುವಂತೆ ಕೋರಿ ಸ್ವೀಕೃತವಾಗಿರುವ ಅರ್ಜಿಗಳನ್ನು ಪರಿಶೀಲಿಸಿ, ಅರ್ಹ ಒಂಬತ್ತು(9) ಅಭ್ಯರ್ಥಿಗಳ ಅರ್ಜಿಗಳನ್ನು ಗೌರವ ಡಾಕ್ಟರೇಟ್ ಪರಿಶೀಲನಾ ಸಮಿತಿಗೆ ಶಿಫಾರಸ್ಸು ಮಾಡಲು ಸಭೆಯು ಅನುಮೋದನೆ ನೀಡಿತು.

**2022-ಸಿಂ-4.02:** ಕುವೆಂಪು ವಿಶ್ವವಿದ್ಯಾಲಯದ 31ನೇ ಮತ್ತು 32ನೇ ವಾರ್ಷಿಕ ಘಟಿಕೋತ್ಸವವನ್ನು ಏರ್ಪಡಿಸುವ ಕುರಿತು.

ನಿರ್ಣಯ : ಕುವೆಂಪು ವಿಶ್ವವಿದ್ಯಾಲಯದ 32ನೇ ಮತ್ತು 32ನೇ ವಾರ್ಷಿಕ ಘಟಿಕೋತ್ಸವವನ್ನು ಏರ್ಪಡಿಸಲು ಸಭೆಯು ಅನುಮೋದನೆ ನೀಡಿತು. ಸದಸ್ಯರಾದ ಶ್ರೀಮತಿ ಕಿರಣ್ ರವೀಂದ್ರ ದೇಸಾಯಿವರ ಸಲಹೆಯಂತೆ ಘಟಿಕೋತ್ಸವದಲ್ಲಿ "ಕುವೆಂಪು ಕುರಿತ ಪುಸ್ತಕ" ವನ್ನು ಹಂಚಲು ನಿರ್ಣಯಿಸಲಾಯಿತು.

## ಅಭಿವೃದ್ಧಿ ವಿಭಾಗ

**2022-ಸಿಂ-4.03:** ಪ್ರೊ. ನವೀನ್ ಕುಮಾರ್ ಎಸ್.ಕೆ. ಕುಲಸಚಿವರು, (ಪರೀಕ್ಷಾಂಗ) ಇವರು Vienna, Austria ನಲ್ಲಿ ನಡೆಯಲಿರುವ ಅಂತರ ರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಲು ಅನುಮತಿ ನೀಡುವ ಕುರಿತು.

ನಿರ್ಣಯ: ಚರ್ಚೆಯ ನಂತರ ಪ್ರೊ. ನವೀನ್ ಕುಮಾರ್ ಎಸ್.ಕೆ. ಕುಲಸಚಿವರು(ಪರೀಕ್ಷಾಂಗ), ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ, ಶಂಕರಘಟ್ಟ ಇವರು Vienna, Austria ಇಲ್ಲಿ ದಿನಾಂಕ:10-07-2022ರಿಂದ 13-07-2022ರವರೆಗೆ IEEE FLEPS2022- ಇವರು ಆಯೋಜಿಸಿರುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ " Screen Printed IDE Modified Metal Oxide Carbon Natotube Composite Layer for Urea Fertilizer Detection" and " Impact of Analyte Ph on the Sensitivity of Screen-Printed Flexible Ammonium Sensor", ಎಂಬ ವಿಷಯದ ಕುರಿತು ಪ್ರಬಂಧ ಮಂಡನೆಗಾಗಿ ವಿದೇಶಕ್ಕೆ ಹೋಗಿ ಬರಲು ಸಭೆಯು ಅನುಮತಿಸಿತು. ವಿದೇಶ ಪ್ರಯಾಣಕ್ಕೆ ಸಂಬಂಧಿಸಿದಂತೆ, ಪ್ರಯಾಣ ಭತ್ಯೆ/ದಿನಭತ್ಯೆಗಳ ವಾಸ್ತವಿಕ ಒಟ್ಟು ವೆಚ್ಚಗಳಲ್ಲಿ 50% ರಷ್ಟು ಹಾಗೂ ನೊಂದಣಿ ಶುಲ್ಕದಲ್ಲಿ 50%ರಷ್ಟು ಅಥವಾ $200, ಇವುಗಳಲ್ಲಿ ಯಾವುದು ಕಡಿಮೆ ಇದೆಯೋ ಅದನ್ನು ವಿಶ್ವವಿದ್ಯಾಲಯದ/ಯುಜಿಸಿ Merged ಯೋಜನೆಯ ಶೀರ್ಷಿಕೆಯಡಿಯಲ್ಲಿ ಆರ್ಥಿಕ ಲಭ್ಯತೆಯನುಸಾರ ಅನುದಾನದಲ್ಲಿ ಪಾವತಿಸಲು, ಉಳಿದ 50%ನ್ನು ಸಂಬಂಧಿತ ಕಾರ್ಯಕ್ರಮಗಳ ವ್ಯವಸ್ಥಾಪಕರುಗಳು/ಪ್ರಾಯೋಜಕರುಗಳಿಂದಲೇ ಅಥವಾ ಇತರೆ ಸಂಸ್ಥೆಗಳಿಂದ ಸ್ವಯಂ ಭರಿಸಿಕೊಳ್ಳುವ ಷರತ್ತಿಗೊಳಪಟ್ಟು, ಪ್ರಯಾಣದ ದಿನಗಳು ಸೇರಿದಂತೆ ಸದರಿ ದಿನಗಳಿಗೆ ಅನ್ಯಕಾರ್ಯನಿಮಿತ್ತ ಮಂಜೂರು ಮಾಡಲು ಸಭೆಯು ಅನುಮೋದನೆ ನೀಡಿತು.

## ಕಾಲೇಜು ಅಭಿವೃದ್ಧಿ ಪರಿಷತ್

**2022-ಸಿಂ-4.04:** ಬಿ.ಇಡಿ. ಕಾಲೇಜು ಶಿಕ್ಷಕರ ನೇಮಕಾತಿ ಅನುಮೋದನೆ ಶುಲ್ಕದ ಬಗ್ಗೆ.

**ನಿರ್ಣಯ:** ಬಿ.ಇಡಿ. ಕಾಲೇಜು ಶಿಕ್ಷಕರ ನೇಮಕಾತಿ ಅನುಮೋದನೆ ಶುಲ್ಕ ಪರಿಷ್ಕರಿಸಿರುವುದನ್ನು ಸಭೆಯು ಅನುಮೋದಿಸಿತು.

## ದಾಸ್ತಾನು ಮತ್ತು ಖರೀದಿ ವಿಭಾಗ

**2022-ಸಿಂ-4.05:** ದಿನಾಂಕ:19-05-2022 ರಂದು ನಡೆದ ಖರೀದಿ ಸಮಿತಿ ಸಭೆಯ ನಡಾವಳಿ ಅನುಮೋದನೆ ಬಗ್ಗೆ.

**ನಿರ್ಣಯ:** ದಿನಾಂಕ:19-05-2022 ರಂದು ನಡೆದ ಖರೀದಿ ಸಮಿತಿ ಸಭೆಯ ನಡಾವಳಿಗಳನ್ನು ಸಭೆಯು ಅನುಮೋದಿಸಿತು.

## ಮಾನವ ಸಂಪನ್ಮೂಲ ವಿಭಾಗ

**2022-ಸಿಂ-4.06:** ಸಹ್ಯಾದ್ರಿ ವಿಜ್ಞಾನ ಕಾಲೇಜಿಗೆ ಪ್ರಭಾರ ಪ್ರಾಂಶುಪಾಲರನ್ನು ನೇಮಕ ಮಾಡುವ ಬಗ್ಗೆ.

**ಚರ್ಚೆ:** ಕುಲಸಚಿವರು ಮಾತನಾಡಿ ಸಹ್ಯಾದ್ರಿ ವಿಜ್ಞಾನ ಕಾಲೇಜಿನಲ್ಲಿ ಪ್ರಭಾರ ಪ್ರಾಂಶುಪಾಲರಾಗಿ ನೇಮಕಗೊಂಡಿದ್ದ ಡಾ. ವಾಗ್ದೇವಿ ಹೆಚ್. ಎಂ. ಇವರು ದಿನಾಂಕ:31-05-2022ರಂದು ವಯೋ ನಿವೃತ್ತಿ ಹೊಂದಿರುತ್ತಾರೆ.

2018ರ ಯುಜಿಸಿ ನಿಯಮಾನುಸಾರ ಘಟಕ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿ ಮಾಡಬೇಕಾಗುತ್ತದೆ. ಆದರೆ ಸಹ್ಯಾದ್ರಿ ಘಟಕ ಕಾಲೇಜುಗಳು ವಿಶ್ವವಿದ್ಯಾಲಯಕ್ಕೆ ಹಸ್ತಾಂತರಗೊಂಡಾಗ ಪ್ರಾಂಶುಪಾಲರ ಹುದ್ದೆಗಳು ಮಂಜೂರಾಗಿರುವುದಿಲ್ಲ ಆದ್ದರಿಂದ ಪ್ರಸ್ತುತ ಪ್ರಾಂಶುಪಾಲರ ಹುದ್ದೆಗಳ ಸೃಜನೆಗೆ ಕರಡು ಪರಿನಿಯಮಗಳನ್ನು ರಚಿಸಿದ್ದು ಸರ್ಕಾರದಿಂದ ಅನುಮೋದನೆ ಪಡೆಯುವ ಪ್ರಕ್ರಿಯೆ ಜಾರಿಯಲ್ಲಿದೆ. ಈ ಕಾರಣಕ್ಕಾಗಿ ಇದುವರೆಗೂ ವಯೋ ನಿವೃತ್ತಿಯಿಂದ ತೆರವಾಗುವ ಪ್ರಭಾರ ಪ್ರಾಂಶುಪಾಲರ ಹುದ್ದೆಗಳಿಗೆ ಸಹ್ಯಾದ್ರಿ ಕಾಲೇಜಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧ್ಯಾಪಕರ ಜೇಷ್ಠತೆಯ ಆಧಾರದ ಮೇಲೆ ಪ್ರಭಾರ ಪ್ರಾಂಶುಪಾಲರ ನೇಮಕಾತಿ ಮಾಡಲಾಗುತ್ತಿದ್ದು ಈ ಬಗ್ಗೆ ಯಾವುದೇ ಪರಿನಿಯಮ ರಚಿಸಿಕೊಂಡಿರುವುದಿಲ್ಲ.

ಯುಜಿಸಿಯ ನಿಯಮದ ಪ್ರಕಾರ ಪ್ರಾಂಶುಪಾಲರ ನೇಮಕಾತಿಯನ್ನು ಅರ್ಜಿಗಳನ್ನು ಆಹ್ವಾನಿಸಿ ಸಂದರ್ಶನದ ಮೂಲಕ ಆಯ್ಕೆ ಮಾಡಲು ನಿರ್ದೇಶಿಸಿರುವುದರಿಂದ ಪ್ರಭಾರ ಪ್ರಾಂಶುಪಾಲರ ಸ್ಥಾನಕ್ಕೆ ಪ್ರಾಂಶುಪಾಲರ ಹುದ್ದೆ ಸೃಜನೆಯ ಪರಿನಿಯಮಾವಳಿಗಳ ಅನುಮೋದನೆಯನ್ನು ಕಾಯ್ದಿರಿಸಿ, ಆಂತರಿಕವಾಗಿ ಅರ್ಜಿಗಳನ್ನು ಆಹ್ವಾನಿಸಿ, ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲು ಮಾನ್ಯ ಕುಲಪತಿಗಳು ಆದೇಶಿಸಿರುತ್ತಾರೆ. ಅದರಂತೆ ನೇಮಕಾತಿ ಸಮಿತಿಯನ್ನು ರಚಿಸಿದ್ದು, ದಿನಾಂಕ:31-05-2022ರಂದು ಸಭೆ ನಡೆಸಿ, ಆಡಳಿತಾತ್ಮಕ ಕಾರಣಗಳಿಂದ ಮುಂದೂಡಲಾಗಿದೆ. ಸಹ್ಯಾದ್ರಿ ವಿಜ್ಞಾನ ಕಾಲೇಜಿನ ಪ್ರಭಾರವನ್ನು ಸಹ್ಯಾದ್ರಿ ಕಲಾ ಕಾಲೇಜಿನ ಪ್ರಭಾರ ಪ್ರಾಂಶುಪಾಲರಿಗೆ ಮುಂದಿನ ಆದೇಶದವರೆಗೆ ವಹಿಸಲಾಗಿದೆ. ಮೇಲ್ಕಂಡ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಚರ್ಚೆ ಹಾಗೂ ನಿರ್ಣಯಕ್ಕಾಗಿ ಮಂಡಿಸಿದೆ ಎಂದು ಹೇಳಿದರು.

ಸದಸ್ಯರಾದ ಶ್ರೀಮತಿ ಕಿರಣ್ ರವೀಂದ್ರ ದೇಸಾಯಿಯವರು ಮಾತನಾಡಿ ಈ ಹಿಂದೆ ಪ್ರಭಾರ ಪ್ರಾಂಶುಪಾಲರನ್ನು ನೇಮಕವನ್ನು ಹೇಗೆ ಮಾಡಲಾಗುತ್ತಿತ್ತು ಎಂದರು.

ಕುಲಸಚಿವರು ಮಾತನಾಡಿ ಜೇಷ್ಠತೆಯ ಆಧಾರದ ಮೇಲೆ ಪ್ರಭಾರ ಪ್ರಾಂಶುಪಾಲರ ನೇಮಕ ಮಾಡಲಾಗುತಿತ್ತು. ಯುಜಿಸಿ ನಿಯಮದ ಪ್ರಕಾರ ಖಾಯಂ ಪ್ರಾಂಶುಪಾಲರ ನೇಮಕಾತಿಯನ್ನು ಜಾಹಿರಾತು ನೀಡಿ ಅರ್ಜಿಗಳನ್ನು ಆಹ್ವಾನಿಸಿ ಸಂದರ್ಶನ ನಡೆಸಿ ಮಾಡಬೇಕಾಗುತ್ತದೆ ಎಂದರು.

ಪ್ರಾದೇಶಿಕ ಜಂಟಿ ನಿರ್ದೇಶಕರು ಮಾತನಾಡಿ ಇಷ್ಟು ವರ್ಷ ಹಳೆಯದಾದ ಕಾಲೇಜಿನಲ್ಲಿ ಪ್ರಾಂಶುಪಾಲರ ಹುದ್ದೆ ಇಲ್ಲ ಎಂದರೆ ಆಶ್ಚರ್ಯ ಆಗುತ್ತದೆ. ಈ ಬಗ್ಗೆ ಹಳೆಯ ದಾಖಲೆಗಳನ್ನು ಮತ್ತೊಮ್ಮೆ ಪರಿಶೀಲಿಸಿ ಎಂದರು. ಮುಂದುವರೆದು ಖಾಯಂ ಹುದ್ದೆಗೆ ನಿಯಮಾನುಸಾರ ಪ್ರಕ್ರಿಯೆಗಳನ್ನು ಮಾಡುವುದು ಸರಿ ಆದರೆ ಪ್ರಭಾರ ಪ್ರಾಂಶುಪಾಲರ ನೇಮಕಾತಿಗೆ ಈ ಎಲ್ಲಾ ಪ್ರಕ್ರಿಯೆಗಳ ಅವಶ್ಯಕತೆ ಇದೆಯೇ ಎಂದರು.

ಸದಸ್ಯರಾದ ಶ್ರೀ ಹೆಚ್.ಬಿ. ರಮೇಶಬಾಬುರವರು ಮಾತನಾಡಿ ನಾನೂ ಕೂಡ ಜೇಷ್ಠತೆಯನುಸಾರ ಮಾಡಿ ಎಂದು ಪತ್ರ ಬರೆದಿದ್ದೆ ಆದರೆ ಜೇಷ್ಠತೆಯಲ್ಲಿ ಬರುವವರು ಅರ್ಹತೆಯಿಲ್ಲದಿದ್ದರೆ ಕಾಲೇಜು ಅಧೋಗತಿಗೆ ಹೋಗುತ್ತದೆ ಎಂದು ಹೇಳಿದರು.

ಸದಸ್ಯರಾದ ಶ್ರೀ ಬಳ್ಳೇಕೆರೆ ಸಂತೋಷ್ ರವರು ಮಾತನಾಡಿ ಅರ್ಜಿಗಳನ್ನು ಆಹ್ವಾನಿಸಿ ಆಯ್ಕೆ ಮಾಡುವುದು ಒಳ್ಳೆಯದೇ ಎಂದು ಹೇಳಿದರು.

ಪ್ರಾದೇಶಿಕ ಜಂಟಿ ನಿರ್ದೇಶಕರು ಮಾತನಾಡಿ ಪ್ರಭಾರ ಪ್ರಾಂಶುಪಾಲರ ಆಯ್ಕೆಗೆ ಮಾನದಂಡಗಳು ಏನಿವೆ ಎಂದು ಕೇಳಿದರು.

ಸದಸ್ಯರಾದ ಶ್ರೀ ಹೆಚ್.ಬಿ. ರಮೇಶಬಾಬುರವರು ಮಾತನಾಡಿ ನನ್ನ ಪ್ರಕಾರ ಆಧ್ಯಾಪಕರುಗಳನ್ನು ಬೋಧನಾಕಾರ್ಯಕ್ಕೆ ಸೀಮಿತಗೊಳಿಸಿ ಪ್ರಾಂಶುಪಾಲರ ಹುದ್ದೆಗೆ ಬೇರೆಯವರನ್ನು ನೇಮಿಸಬಹುದು ಎಂದು ಹೇಳಿದರು.

ಸದಸ್ಯರಾದ ಡಾ. ಧನಂಜಯ್ ಬಿ.ಜಿ. ಇವರು ಮಾತನಾಡಿ ಪ್ರಾಂಶುಪಾಲರಾದವರಿಗೆ ಶೈಕ್ಷಣಿಕ ಹಿನ್ನೆಲೆ ಇರಬೇಕು ಆದ್ದರಿಂದ ಅಧ್ಯಾಪಕ ವರ್ಗದವರನ್ನೇ ನೇಮಕ ಮಾಡಬೇಕು ಎಂದರು. ಸದಸ್ಯರಾದ ಪ್ರೊ. ರಿಯಾಜ್ ಮಹಮೂದ್‌ರವರು ಮಾತನಾಡಿ ಅರ್ಜಿ ಸಲ್ಲಿಸಿದ್ದ ಅಭ್ಯರ್ಥಿಗಳನ್ನು ದಿನಾಂಕ:31-05-2022ರಂದು ಸಂದರ್ಶನಕ್ಕೆ ಕರೆಯಲಾಗಿತ್ತು. ಆದರೆ. ಪ್ರಭಾರ ಪ್ರಾಂಶುಪಾಲರ ಆಯ್ಕೆಗೆ ಮಾನದಂಡ/ ಮಾರ್ಗಸೂಚಿಗಳನ್ನು ನಿಗದಿಪಡಿಸಿರಲಿಲ್ಲ ಹಾಗೂ ಸಮಿತಿಯ ಸದಸ್ಯರಾದ ಐಕ್ಯೂಎಸಿ ನಿರ್ದೇಶಕರು ಸಭೆಯಲ್ಲಿ ಗೈರು ಹಾಜರಾಗಿದ್ದರಿಂದ ಮುಂದಿನ ಸಭೆಗೆ ಇವೆಲ್ಲವನ್ನು ಸಿದ್ಧಪಡಿಸಿಕೊಂಡು ಅಭ್ಯರ್ಥಿಗಳ ಸೇವಾಜೇಷ್ಠತೆ, ಐಕ್ಯೂಎಸಿ ಅಂಕಗಳು ಬಂದ ಮೇಲೆ ಸಂದರ್ಶನ ನಡೆಸಲು ಸಮಿತಿಯು ತೀರ್ಮಾನಿಸಿತು ಎಂದು ಹೇಳಿದರು.

ಕುಲಸಚಿವ(ಪರೀಕ್ಷಾಂಗ)ರವರು ಮಾತನಾಡಿ ಯುಜಿಸಿ ನಿಯಮಗಳು ಬಹಳ ಹಿಂದೆಯೇ ಬಂದಿದೆ, ಇಷ್ಟು ವರ್ಷಗಳು ಜೇಷ್ಠತೆಯ ಆಧಾರದ ಮೇಲೆ ನೇಮಕಾತಿ ಮಾಡಿ ಈಗ ಯುಜಿಸಿ ನಿಯಮದ ಪ್ರಕಾರ ಅರ್ಜಿಗಳನ್ನು ಆಹ್ವಾನಿಸಿ ಆಯ್ಕೆ ಮಾಡುತ್ತೇವೆ ಎಂದರೆ ಉದ್ದೇಶಪೂರ್ವಕವಾಗಿ ಒಬ್ಬ ವ್ಯಕ್ತಿಗೆ ಅವಕಾಶ ತಪ್ಪಿಸಲು ಮಾಡುತ್ತಿರಬಹುದು ಎನ್ನಿಸಬಹುದು ಎಂದು ಹೇಳಿದರು.

ಸದಸ್ಯರಾದ ಶ್ರೀ ಬಳ್ಳೇಕೆರೆ ಸಂತೋಷ್‌ರವರು ಮಾತನಾಡಿ ಕಾಲೇಜುಗಳ ಅಭಿವೃದ್ಧಿಯ ದೃಷ್ಟಿಯಿಂದ ಯುಜಿಸಿ ಮಾರ್ಗಸೂಚಿಯನ್ವಯ ಅರ್ಹತೆ ಇರುವವರು ಆಯ್ಕೆಯಾಗಲಿ ಎಂದು ಹೇಳಿದರು.

ಸದಸ್ಯರಾದ ಡಾ. ಧನಂಜಯ್ ಬಿ.ಜಿ. ಇವರು ಮಾತನಾಡಿ ನೇರ ನೇಮಕಾತಿ ಮಂಜೂರಾದ ಹುದ್ದೆಗಳಿಗೆ ಮಾತ್ರ ಎಂದು ಹೇಳಿದರು.

ಕುಲಸಚಿವರು ಮಾತನಾಡಿ ಜೇಷ್ಠತೆಯನುಸಾರ ಮಾಡುವುದೇ ಆಗಲಿ ಅಥವಾ ಅರ್ಜಿ ಆಹ್ವಾನಿಸಿ ನೇಮಕಾತಿ ಮಾಡುವುದೇ ಆಗಲಿ ಯಾವುದಕ್ಕೇ ಆದರೂ ಮಾರ್ಗಸೂಚಿಗಳನ್ನು ಮಾಡಿಕೊಂಡು ಅದರಂತೆ ಕ್ರಮಕೈಗೊಳ್ಳಬೇಕು ಎಂದು ಪರಿಣಿತರ ಸಮಿತಿಯು ಅಭಿಪ್ರಾಯಪಟ್ಟಿದೆ ಎಂದು ತಿಳಿಸಿದರು.

ಸದಸ್ಯರಾದ ಶ್ರೀ ಧರ್ಮಪ್ರಸಾದ್‌ರವರು ಮಾತನಾಡಿ ನೇಮಕಾತಿ ಮಾಡುವಾಗ ಸಿಂಡಿಕೇಟ್ ಸಭೆಯ ಗಮನಕ್ಕೆ ತಂದು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಕುಲಸಚಿವ(ಪರೀಕ್ಷಾಂಗ)ರವರು ಮಾತನಾಡಿ ಪರಿನಿಯಮಗಳು ಅನುಮೋದನೆ ಆದ ಮೇಲೆ ಯುಜಿಸಿ ಮಾರ್ಗಸೂಚಿಗಳಂತೆ ಅರ್ಜಿ ಆಹ್ವಾನಿಸಿ ಆಯ್ಕೆ ಪ್ರಕ್ರಿಯೆ ನಡೆಸಬಹುದು. ಪ್ರಸ್ತುತ ಹಿಂದೆ ಇದ್ದ ಹಾಗೆ ಜೇಷ್ಠತೆಯನುಸಾರ ನೇಮಕಾತಿ ಮಾಡಬಹುದು ಎಂದು ಹೇಳಿದರು.

ಸದಸ್ಯರಾದ ಶ್ರೀ ಬಳ್ಳೇಕೆರೆ ಸಂತೋಷ್‌ರವರು ಮಾತನಾಡಿ ಅರ್ಜಿಗಳನ್ನು ಆಹ್ವಾನಿಸಿ ಆಯ್ಕೆ ಮಾಡಿದರೆ ಹೆಚ್ಚು ದಕ್ಷತೆಯಿಂದ ಕಾಲೇಜಿನ ಅಭಿವೃದ್ಧಿಯ ಕೆಲಸ ಮಾಡಬಹುದು ಆದ್ದರಿಂದ ಅರ್ಜಿಗಳನ್ನು ಆಹ್ವಾನಿಸುವುದು ಒಳ್ಳೆಯದು ಎಂದು ಹೇಳಿದರು.

ಸದಸ್ಯರಾದ ಶ್ರೀ ಹೆಚ್.ಬಿ. ರಮೇಶಬಾಬುರವರು ಮಾತನಾಡಿ ಸಹ್ಯಾದ್ರಿ ಕಾಲೇಜಿನ ಅಭಿವೃದ್ಧಿಯ ದೃಷ್ಟಿಯಿಂದ ನೇರ ನೇಮಕಾತಿ ಒಳ್ಳೆಯದು ಆದರೆ ನೇಮಕಾತಿ ಪಾರದರ್ಶಕವಾಗಿರಬೇಕು ಎಂದರು.

ಸದಸ್ಯರಾದ ಪ್ರೊ. ರಿಯಾಜ್ ಮಹಮೂದ್‌ರವರು ಮಾತನಾಡಿ ಈಗ ಒಂದು ರೀತಿಯ ಪದ್ಧತಿಯಿಂದ ಇನ್ನೊಂದು ರೀತಿಯ ನೇಮಕಾತಿ ಪ್ರಕ್ರಿಯೆಗೆ ಬದಲಾಗುತ್ತಿರುವುದರಿಂದ ಮಾರ್ಗದರ್ಶಿ ಸೂತ್ರಗಳ ಅಗತ್ಯವಿದೆ. ಜೇಷ್ಠತೆಯ ಆಧಾರದ ಮೇಲೆ ನೇಮಕಾತಿ ಮಾಡಬೇಕೋ ಅಥವಾ ಅರ್ಜಿಗಳನ್ನು ಆಹ್ವಾನಿಸಿ ಆಯ್ಕೆ ಮಾಡಬೇಕೋ ಎಂಬ ಬಗ್ಗೆ ಈ ಸಭೆಯು ನಿರ್ಣಯ ತೆಗೆದುಕೊಳ್ಳಬೇಕು ಎಂದು ಹೇಳಿದರು. ಸಭೆಯು ನಿರ್ಣಯ ತೆಗೆದುಕೊಂಡು ಪ್ರಭಾರ ಪ್ರಾಂಶುಪಾಲರ ಹುದ್ದೆಯ ನೇಮಕಾತಿಗೆ ಮಾನದಂಡಗಳನ್ನು ನಿಗದಿಪಡಿಸಿ ನೀಡಿದರೆ ಆಯ್ಕೆ ಸಮಿತಿಯು ಸದರಿ ಮಾರ್ಗಸೂಚಿಗಳನ್ವಯ ಕ್ರಮ ಕೈಗೊಳ್ಳಬಹುದು ಎಂದು ಹೇಳಿದರು.

ಸದಸ್ಯರಾದ ಶ್ರೀ ಧರ್ಮಪ್ರಸಾದ್‌ರವರು ಮಾತನಾಡಿ ಸಹ್ಯಾದ್ರಿ ಕಲಾ ಕಾಲೇಜಿನ ಪ್ರಾಂಶುಪಾಲರಿಗೇ ಸಹ್ಯಾದ್ರಿ ವಿಜ್ಞಾನ ಕಾಲೇಜಿನ ಜವಾಬ್ದಾರಿ ವಹಿಸಿಕೊಟ್ಟಿರುವುದು ಸರಿಯಲ್ಲ ಎರಡೂ ಕಾಲೇಜುಗಳನ್ನು ನಿರ್ವಹಿಸುವುದು ಕಷ್ಟವಾಗಬಹುದು ಎಂದು ಹೇಳಿದರು.

ಪ್ರಾದೇಶಿಕ ಜಂಟಿ ನಿರ್ದೇಶಕರು ಮಾತನಾಡಿ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿಯ ನಿರ್ದೇಶಕರು ಹಾಗೂ ಎಲ್ಲಾ ಡೀನರುಗಳನ್ನೊಳಗೊಂಡ ಸಮಿತಿಯನ್ನು ರಚಿಸಿ ಮಾನದಂಡಗಳನ್ನು ನಿಗದಿಪಡಿಸಲು ತಿಳಿಸಬಹುದು ಎಂದು ಹೇಳಿದರು.

ಸದಸ್ಯರಾದ ಶ್ರೀ ಧರ್ಮಪ್ರಸಾದ್‌ರವರು ಮಾತನಾಡಿ ನಿಯಮಾನುಸಾರ ಮಾಡುವುದಕ್ಕೆ ನಮ್ಮ ಅಭ್ಯಂತರವೇನೂ ಇಲ್ಲ. ಪ್ರಸ್ತುತ ಮೂರು ಕಾಲೇಜುಗಳಿಗೂ ಪ್ರಭಾರ ಪ್ರಾಂಶುಪಾಲರೇ ಕಾರ್ಯ ನಿರ್ವಹಿಸುತ್ತಿದ್ದರು. ಕುಲಸಚಿವರು, ಕುಲಸಚಿವರು(ಮೌಲ್ಯಮಾಪನ), ಪ್ರಾದೇಶಿಕ ಜಂಟಿ ನಿರ್ದೇಶಕರು ಹಾಗೂ ಸದಸ್ಯರಾದ ಪ್ರೊ. ರಿಯಾಜ್ ಮಹಮೂದ್‌ರವರು ತೆಗೆದುಕೊಳ್ಳುವ ನಿರ್ಣಯಕ್ಕೆ ನಮ್ಮ ಸಮ್ಮತಿ ಇದೆ ಎಂದು ಹೇಳಿದರು.

ಸದಸ್ಯರಾದ ಶ್ರೀ ಹೆಚ್.ಬಿ. ರಮೇಶಬಾಬುರವರು ಮಾತನಾಡಿ ಎರಡೂ ಕಾಲೇಜಿನ ಜವಾಬ್ದಾರಿಯನ್ನು ಒಬ್ಬರೇ ಪ್ರಾಂಶುಪಾಲರಿಗೆ ವಹಿಸಿರುವುದು ಸರಿಯಾದ ಕ್ರಮವಲ್ಲ ಎಂದು ಹೇಳಿದರು. ಸದಸ್ಯರಾದ ಶ್ರೀ ಧರ್ಮಪ್ರಸಾದ್‌ರವರು ಇದನ್ನೇ ಅನುಮೋದಿಸಿದರು.

ಸದಸ್ಯರಾದ ಶ್ರೀ ಧರ್ಮಪ್ರಸಾದ್‌ರವರು ಮಾತನಾಡಿ ಮಾನದಂಡಗಳನ್ನು ನಿಗದಿಪಡಿಸಿದ ಮೇಲೆ ನಾಲ್ಕೂ ಕಾಲೇಜುಗಳಿಗೂ ಪ್ರಭಾರ ಪ್ರಾಂಶುಪಾಲರ ಹುದ್ದೆಗಳಿಗೆ ಅರ್ಜಿಗಳನ್ನು ಕರೆದು ಹೊಸದಾಗಿ ನೇಮಕ ಮಾಡಬೇಕು ಎಂದರು.

ಸದಸ್ಯರಾದ ಡಾ.ಬಿ.ಜಿ.ಧನಂಜಯ್ ಇವರು ಮಾತನಾಡಿ ಸರ್ಕಾರಿ ಕಾಲೇಜುಗಳಲ್ಲಿ ಸೇವಾ ಜೇಷ್ಠತೆಯಲ್ಲಿ ಹಿರಿಯರಾದವರಿಗೆ ಪ್ರಭಾರ ನೀಡಲಾಗುತ್ತದೆ, ಅದರಂತೆ ಮಾರ್ಗಸೂಚಿಗಳನ್ನು ರಚಿಸುವ ತನಕ ಸದ್ಯಕ್ಕೆ ಈಗಿರುವಂತೆ ಜೇಷ್ಠತೆಯನುಸಾರ ನೇಮಕಾತಿ ಮಾಡಬಹುದು ಎಂದರು.

ಪ್ರಾದೇಶಿಕ ಜಂಟಿ ನಿರ್ದೇಶಕರು ಮಾತನಾಡಿ ಈಗ್ಗ ಒಂದು ಕಾಲೇಜಿಗೆ ಅರ್ಜಿ ಆಹ್ವಾನಿಸಿ ಸಂದರ್ಶನದ ಮೂಲಕ ಆಯ್ಕೆ ಮಾಡಿ ಮುಂದಿನ ದಿನಗಳಲ್ಲಿ ಎಲ್ಲಾ ಘಟಕ ಕಾಲೇಜುಗಳಿಗೂ ಇದೇ ನಿಯಮವನ್ನು ಅನ್ವಯಿಸಬಹುದು ಎಂದು ಹೇಳಿದರು.

ಸದಸ್ಯರಾದ ಶ್ರೀ ಧರ್ಮಪ್ರಸಾದ್‌ರವರು ಮಾತನಾಡಿ ಜೇಷ್ಠತೆಯನುಸಾರ ಈಗಾಗಲೇ ಪ್ರಭಾರ ಪ್ರಾಂಶುಪಾಲರ ಹುದ್ದೆಗೆ ಅರ್ಜಿ ಸಲ್ಲಿಸಿರುವವರಲ್ಲಿ ಯಾರನ್ನಾದರೂ ಆಯ್ಕೆ ಮಾಡಲಿ ಆದರೆ ಒಬ್ಬರಿಗೇ ಎರಡೂ ಕಾಲೇಜಿನ ಪ್ರಭಾರ ವಹಿಸುವುದಕ್ಕೆ ತಮ್ಮ ಆಕ್ಷೇಪವಿದೆ ಎಂದು ಹೇಳಿದರು.

ನಿರ್ಣಯ: ಸುಧೀರ್ಘ ಚರ್ಚೆಯ ನಂತರ ಯುಜಿಸಿ ಮಾರ್ಗಸೂಚಿಯನುಸಾರ ಯೋಜನೆ, ಮೇಲ್ವಿಚಾರಣೆ ಮೌಲ್ಯಮಾಪನ ಮಂಡಳಿಯ ನಿರ್ದೇಶಕರು ಆಯ್ಕೆ ಸಮಿತಿಯ ಸಂಚಾಲಕರಾಗಿದ್ದು, ಸದರಿಯವರು ಎಲ್ಲಾ ಡೀನರುಗಳ ಸಭೆ ಕರೆದು ಪ್ರಭಾರ ಪ್ರಾಂಶುಪಾಲರ ತಾತ್ಕಾಲಿಕ ನೇಮಕಾತಿಗೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ರಚಿಸುವ ಜವಾಬ್ದಾರಿಯನ್ನು ವಹಿಸಲು ತೀರ್ಮಾನಿಸಲಾಯಿತು. ಸದರಿ ಮಾರ್ಗಸೂಚಿಗಳನ್ನು ಮುಂದಿನ ಸಿಂಡಿಕೇಟ್ ಸಭೆಯಲ್ಲಿಟ್ಟು ಅನುಮೋದನೆ ಪಡೆದು ಮುಂದಿನ ಕ್ರಮ ಕೈಗೊಳ್ಳಲು ನಿರ್ಣಯಿಸಲಾಯಿತು. ಹಾಗೂ ಅಲ್ಲಿಯವರೆಗೆ ಈ ಹಿಂದೆ ಅನುಸರಿಸುತ್ತಿದ್ದ ಕ್ರಮದಂತೆ ಮೂರೂ ಕಾಲೇಜುಗಳನ್ನೊಳಗೊಂಡ ಜೇಷ್ಠತಾ ಪಟ್ಟಿಯಲ್ಲಿ ಹಿರಿಯರಾದವರಿಗೆ ತಾತ್ಕಾಲಿಕವಾಗಿ ಸಹ್ಯಾದ್ರಿ ವಿಜ್ಞಾನ ಕಾಲೇಜಿನ ಪ್ರಾಂಶುಪಾಲರ ಪ್ರಭಾರವನ್ನು ವಹಿಸಲು ಸಭೆಯು ಅನುಮತಿ ನೀಡಿತು.

2022–ಸಿಂ–4.07: ಶ್ರೀ ಅಶೋಕ್ ವಿ., ಸಹಾಯಕ ಪ್ರಾಧ್ಯಾಪಕರು, ಸಹ್ಯಾದ್ರಿ ಕಲಾ ಮತ್ತು ವಾಣಿಜ್ಯ ಕಾಲೇಜು, ಶಿವಮೊಗ್ಗ– ಪ್ರಸ್ತುತ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ.

ಚರ್ಚೆ : ಕುಲಸಚಿವರು ವಿಷಯ ಮಂಡಿಸಿ ಮಾತನಾಡಿ ಶ್ರೀ ಅಶೋಕ್ ವಿ., ಸಹಾಯಕ ಪ್ರಾಧ್ಯಾಪಕರು, ಸಹ್ಯಾದ್ರಿ ಕಲಾ ಮತ್ತು ವಾಣಿಜ್ಯ ಕಾಲೇಜು, ಶಿವಮೊಗ್ಗ– ಪ್ರಸ್ತುತ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಕುರಿತು ಸರ್ಕಾರದಿಂದ ಪತ್ರ ಬಂದಿದ್ದು, ಅವ್ಯವಹಾರ / ಹಣ ದುರುಪಯೋಗ / ಕೆಟಿಟಿಪಿ ಕಾಯ್ದೆ ಉಲ್ಲಂಘನೆ ಮಾಡಿರುವ ಇವರನ್ನು ಅಮಾನತ್ತುಗೊಳಿಸಲು ಸಕ್ಷಮ ಪ್ರಾಧಿಕಾರವಾದ ಕುವೆಂಪು ವಿಶ್ವವಿದ್ಯಾಲಯವು ಸಂಬಂಧಪಟ್ಟ ಪ್ರಾಧಿಕಾರದ ಅನುಮೋದನೆ ಪಡೆದು ಸರ್ಕಾರಕ್ಕೆ ವರದಿ ನೀಡುವಂತೆ ತಿಳಿಸಿರುತ್ತಾರೆ ಎಂದು ಸಭೆಗೆ ತಿಳಿಸಿದರು.

ಮೇಲ್ಕಂಡವರ ಬಗ್ಗೆ ಪೂರ್ಣ ಮಾಹಿತಿ ಲಭ್ಯವಿಲ್ಲದೇ ಇರುವುದರಿಂದ ಪೂರ್ಣ ಮಾಹಿತಿಯೊಂದಿಗೆ ಮುಂದಿನ ಸಭೆಗೆ ಮಂಡಿಸುವಂತೆ ಸದಸ್ಯರು ಕೋರಿದರು.

ನಿರ್ಣಯ: ಚರ್ಚೆಯ ನಂತರ ಪೂರ್ಣ ಮಾಹಿತಿಯೊಂದಿಗೆ ಮುಂದಿನ ಸಭೆಗೆ ಮಂಡಿಸುವಂತೆ ತಿಳಿಸಿ ವಿಷಯವನ್ನು ಮುಂದೂಡಲಾಯಿತು.

2022–ಸಿಂ–4.08: ಕುವೆಂಪು ವಿಶ್ವವಿದ್ಯಾಲಯದ ಬೋಧಕೇತರ ಸಿಬ್ಬಂದಿಗಳ ವೇತನವನ್ನು ಖಜಾನೆಯಿಂದ ಕ್ಲೈಮು ಮಾಡುವ ಕುರಿತು ಆಕ್ಷೇಪಣೆ ಬಂದಿರುವ ಕುರಿತು.

ಚರ್ಚೆ : ಕುಲಸಚಿವರು ವಿಷಯ ಮಂಡಿಸಿ ಮಾತನಾಡಿ 2012ರಲ್ಲಿ ಉನ್ನತೀಕರಣದ ಮೂಲಕ ಹಿರಿಯ ಸಹಾಯಕರು ಮತ್ತು ಪ್ರಥಮ ದರ್ಜೆ ಸಹಾಯಕರುಗಳ ಹುದ್ದೆಗಳಿಗೆ ಹೆಚ್ಚುವರಿಯಾಗಿ ಬಡ್ತಿ ನೀಡಲಾಗಿದೆ. ಈ ಕುರಿತು ಪರಿನಿಯಮ ರಚಿಸಿ ಸರ್ಕಾರಕ್ಕೂ ಕಳುಹಿಸಿಕೊಡಲಾಗಿತ್ತು. ಆದರೆ ಸಕ್ಷಮ ಪ್ರಾಧಿಕಾರಗಳ ಅನುಮೋದನೆಯೊಂದಿಗೆ ಪುನಃ ಸಲ್ಲಿಸುವಂತೆ ತಿಳಿಸಿ ಹಿಂದಿರುಗಿಸಿರುತ್ತಾರೆ. 2012ರಿಂದಲೂ ಉನ್ನತೀಕರಣದ ಮೂಲಕ ಬಡ್ತಿ ನೀಡುತ್ತಾ ಬಂದಿದ್ದು ವೇತನ ಪಾವತಿ ಮಾಡಲಾಗುತ್ತಿದೆ. ಈಗ ಸರ್ಕಾರದ ನಿರ್ದೇಶನದ ಮೇರೆಗೆ ಹೆಚ್.ಆರ್.ಎಂ.ಎಸ್. ಮೂಲಕ ವೇತನ ಸೆಳೆಯಲಾಗುತ್ತಿದ್ದು ಪ್ರಾದೇಶಿಕ ಜಂಟಿ ನಿರ್ದೇಶಕರು ವೇತನದ ಬಿಲ್ಲುಗಳಿಗೆ ಮೇಲು ಸಹಿ

ಮಾಡಬೇಕಾಗಿರುತ್ತದೆ. ಸದರಿ ವಿಭಾಗದಲ್ಲಿ ವೇತನದ ಬಿಲ್ಲುಗಳನ್ನು ಪರಿಶೀಲಿಸಿ ಸರ್ಕಾರದಿಂದ ಮಂಜೂರಾದ ಹುದ್ದೆಗಳ ಸಂಖ್ಯೆಗೂ ಬಿಲ್ಲಿನಲ್ಲಿ ನಮೂದಿಸಿರುವ ಹುದ್ದೆಗಳ ಸಂಖ್ಯೆಗೂ ವ್ಯತ್ಯಾಸವಿರುವುದರಿಂದ ಮಾರ್ಚ್ ಮಾಹೆಯ ವೇತನ ಪಾವತಿ ತಡೆ ಹಿಡಿಯಲಾಗಿತ್ತು. ನಂತರ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ದೃಢೀಕರಣ ಪತ್ರವನ್ನು ವಿಶ್ವವಿದ್ಯಾಲಯದಿಂದ ನೀಡಿದ ನಂತರವೇ ವೇತನದ ಬಿಲ್ಲುಗಳಿಗೆ ಮೇಲು ಸಹಿ ಮಾಡಿ ಖಜಾನೆಗೆ ಕಳುಹಿಸಿರುತ್ತಾರೆ ಈ ಹಿನ್ನೆಲೆಯಲ್ಲಿ ವಿಷಯವನ್ನು ಸಭೆಗೆ ಮಂಡಿಸಿದೆ ಎಂದು ಹೇಳಿದರು.

ಪ್ರಾದೇಶಿಕ ಜಂಟಿ ನಿರ್ದೇಶಕರು ಈ ವಿಷಯದ ಕುರಿತು ಮಾತನಾಡಿ 2012ರಿಂದಲೂ ಉನ್ನತೀಕರಣದ ಮೂಲಕ ಬಡ್ತಿ ನೀಡುತ್ತಾ ವೇತನ ನಿಗದೀಕರಣ ಮಾಡಿ ವೇತನ ಪಾವತಿಸುತ್ತಾ ಬರಲಾಗುತ್ತಿದೆ ಆದರೆ ಮಂಜೂರಾದ ಹುದ್ದೆಗಳೂ ಹಾಗೂ ವೇತನದ ಬಿಲ್ಲಿನಲ್ಲಿ ನಮೂದಿಸಿದ ಹುದ್ದೆಗಳ ಸಂಖ್ಯೆಗೂ ವ್ಯತ್ಯಾಸವಿದೆ, ಪರಿನಿಯಮಗಳು ಅನುಮೋದನೆಯಾಗಿಲ್ಲ ಸಿಂಡಿಕೇಟ್ ಸಭೆಯ ಅನುಮೋದನೆಯ ಮೇರೆಗೆ ಬಡ್ತಿ ನೀಡಿ ವೇತನ ಪಾವತಿಸಲಾಗುತ್ತಿದೆ. ಪ್ರಸ್ತುತ ಹೆಚ್.ಆರ್.ಎಂ.ಎಸ್. ಮೂಲಕ ವೇತನ ಸೆಳೆಯಲಾಗುತ್ತಿರುವುದರಿಂದ ವೇತನದ ಬಿಲ್ಲುಗಳಿಗೆ ತಾವು ಮೇಲು ಸಹಿ ಮಾಡಬೇಕಾಗಿದೆ. ಮಾಹಿತಿ ಹಕ್ಕು ಕಾರ್ಯಕರ್ತರೊಬ್ಬರು ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿ ಸಲ್ಲಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟವುಂಟು ಮಾಡುತ್ತಿದ್ದೀರಿ ಎಂದು ಈ ಬಗ್ಗೆ ಮಾಹಿತಿ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಪ್ರಶ್ನೆಗಳಿಗೆ ಉತ್ತರ ಕೊಡುವುದು ಕಷ್ಟವಾಗುತ್ತಿದೆ ಆದ್ದರಿಂದ ಈ ಬಗ್ಗೆ ಶೀಘ್ರವಾಗಿ ಕ್ರಮವಹಿಸಿ ಸರಿಪಡಿಸಬೇಕು ಇಲ್ಲವಾದಲ್ಲಿ ವೇತನ ಪಾವತಿ ಕಷ್ಟವಾಗುತ್ತದೆ ಎಂದರು.

ಸದಸ್ಯರಾದ ಶ್ರೀ ಧರ್ಮಪ್ರಸಾದ್‌ರವರು ಮಾತನಾಡಿ ಎಲ್ಲಾ ಹುದ್ದೆಗಳು ಸರ್ಕಾರದ ಮಂಜೂರಾದ ಹುದ್ದೆಗಳ ಮಿತಿಯೊಳಗೆ ಇದೆ. ಪರಿನಿಯಮಗಳು ಅನುಮೋದನೆಯಾಗಿಲ್ಲ ಆದರೆ ವೇತನದ ಬಿಲ್ಲುಗಳನ್ನು ಹಣಕಾಸು ಅಧಿಕಾರಿಗಳು ಪರಿಶೀಲಿಸಿ ಸಹಿ ಮಾಡಿರುತ್ತಾರೆ, ಕುಲಸಚಿವರು ಅನುಮೋದಿಸಿರುತ್ತಾರೆ. ಆದರಿಂದ ಏನೂ ಸಮಸ್ಯೆಯಾಗುವುದಿಲ್ಲ ಎಂದು ಹೇಳಿದರು.

ಕುಲಸಚಿವರು ಮಾತನಾಡಿ ಒಟ್ಟು ಹುದ್ದೆಗಳಿಗಿಂತ ಹೆಚ್ಚುವರಿಯಾಗಿಲ್ಲ ಆದರೆ ಆರ್ಥಿಕ ಹೊರೆ ಆಗುತ್ತದೆ ಎಂದು ಹೇಳಿದರು.

ಸದಸ್ಯರಾದ ಶ್ರೀ ರಮೇಶಬಾಬು ಹೆಚ್.ಬಿ. ರವರು ಮಾತನಾಡಿ ಇದು ವಿಶ್ವವಿದ್ಯಾಲಯದ ಆಂತರಿಕ ವಿಚಾರ ವೇತನ ತಡೆ ಹಿಡಿದರೆ ಸಾರ್ವಜನಿಕ ಸಮಸ್ಯೆಯಾಗುತ್ತದೆ ಎಂದು ಹೇಳಿದರು. ಅಲ್ಲದೇ ಪರಿನಿಯಮ ಸಮಿತಿಯನ್ನು ಪರಿಷ್ಕರಿಸಿ ಪುನ ರಚಿಸುವಂತೆ ಕೋರಿದರು.

ಸದಸ್ಯರಾದ ಶ್ರೀ ಧರ್ಮಪ್ರಸಾದ್‌ರವರು ಮಾತನಾಡಿ ಪರಿನಿಯಮಗಳಿಗೆ ಸರ್ಕಾರದ ಅನುಮೋದನೆ ಪಡೆಯಲು ಶೀಘ್ರವಾಗಿ ಕ್ರಮ ಕೈಗೊಳ್ಳಲಾಗುವುದು ಅಲ್ಲಿಯವರೆಗೂ ನೌಕರರ ವೇತನ ತಡೆ ಹಿಡಿಯಬಾರದೆಂದು ಕೋರಿದರು. ಹುದ್ದೆಗಳಿಗೆ ಸಂಬಂಧಿಸಿದ ಗೊಂದಲಗಳು ಎಲ್ಲಾ ಸಂಸ್ಥೆಗಳಲ್ಲೂ ಇರುತ್ತವೆ ಎಂದು ಹೇಳಿದರು.

ಮಾನ್ಯ ಕುಲಪತಿಗಳು ಮಾತನಾಡಿ ಹತ್ತು ವರ್ಷಗಳಿಂದ ಈ ತೊಂದರೆಯಿದೆ, ಕೂಡಲೇ ಸರಿಪಡಿಸಲು ಕ್ರಮಕೈಗೊಳ್ಳಬೇಕು ಎಂದು ಹೇಳಿದರು.

ಪ್ರಾದೇಶಿಕ ಜಂಟಿ ನಿರ್ದೇಶಕರು ಮಾತನಾಡಿ ಮಾಹಿತಿ ಹಕ್ಕು ಅರ್ಜಿಗಳಿಗೆ ಉತ್ತರ ಕೊಡುವುದು ಕಷ್ಟವಾಗುತ್ತದೆ ಆದ್ದರಿಂದ ಕೂಡಲೇ ಕ್ರಮಕೈಗೊಳ್ಳಬೇಕು ಎಂದು ಹೇಳಿದರು.

ನಿರ್ಣಯ : ಚರ್ಚೆಯ ನಂತರ ಬೋಧಕೇತರ ಸಿಬ್ಬಂದಿಗಳ ಹುದ್ದೆಗಳ ಉನ್ನತೀಕರಣಕ್ಕೆ ಸಂಬಂಧಿಸಿದ ಪರಿನಿಯಮಗಳನ್ನು ಸರ್ಕಾರದ ನಿರ್ದೇಶನದಂತೆ ಸಕ್ಷಮ ಪ್ರಾಧಿಕಾರಗಳಲ್ಲಿ ಮಂಡಿಸಿ ಅನುಮೋದನೆ ಪಡೆದು ಶೀಘ್ರವಾಗಿ ಸರ್ಕಾರದ ಅನುಮೋದನೆಗೆ ಕಳುಹಿಸಿಕೊಡಬೇಕೆಂದು ನಿರ್ಣಯಿಸಲಾಯಿತು.

ಹಾಗೂ ಅಲ್ಲಿಯವರೆಗೂ ಸಿಬ್ಬಂದಿಗಳ ವೇತನ ತಡೆಹಿಡಿಯಬಾರದೆಂದು ತೀರ್ಮಾನಿಸಲಾಯಿತು ಹಾಗು ಪರಿನಿಯಮ ಸಮಿತಿಯನ್ನು ಪುನಾರಚಿಸಲು ಸಭೆಯು ಒಪ್ಪಿಗೆ ನೀಡಿತು.

**2022–ಸಿಂ–4.09:** ದಿನಾಂಕ:28–02–2022 ರಂದು ನಡೆದ ಸಿಂಡಿಕೇಟ್ ಸಭೆಯಲ್ಲಿ ನಕಲಿ ಉತ್ತರ ಪತ್ರಿಕೆ ಪ್ರಕರಣಕ್ಕೆ ಸಂಬಂಧಿಸಿದ ಆರೋಪಿತರಿಗೆ ಸಕ್ಷಮ ಪ್ರಾಧಿಕಾರದಿಂದ ಅಭಿಯೋಜನಾ ಮಂಜೂರಾತಿ ಪತ್ರ ನೀಡಲು ನಿರ್ಣಯವಾಗಿರುವ ಬಗ್ಗೆ ಆಕ್ಷೇಪಣೆ ಸಲ್ಲಿಸಿರುವ ಕುರಿತು.

ನಿರ್ಣಯ : ನಕಲಿ ಉತ್ತರ ಪತ್ರಿಕೆ ಪ್ರಕರಣಕ್ಕೆ ಸಂಬಂಧಿಸಿದ ಆರೋಪಿತರಿಗೆ ಸಕ್ಷಮ ಪ್ರಾಧಿಕಾರದಿಂದ ಅಭಿಯೋಜನಾ ಮಂಜೂರಾತಿ ಪತ್ರ ನೀಡುವ ಕುರಿತಂತೆ ನಿರ್ಣಯ ತೆಗೆದುಕೊಳ್ಳುವುದಕ್ಕೆ ಸಂಬಂಧಿಸಿದಂತೆ, ಕುಲಸಚಿವರು ವಿಷಯದ ಗಂಭೀರತೆಯನ್ನು ಸಭೆಯ ಗಮನಕ್ಕೆ ತಂದರೂ ಸಹ, ಇದು ತುಂಬಾ ಹಳೆಯ ವಿಷಯವಾಗಿರುವುದರಿಂದ ಈ ಕುರಿತು ನ್ಯಾಯಾಲಯದ ತೀರ್ಪನ್ನು ಒಳಗೊಂಡಂತೆ ಸಮಗ್ರ ಮಾಹಿತಿಯೊಂದಿಗೆ ಚರ್ಚಿಸಬೇಕಾಗಿರುವುದರಿಂದ ಸಮಯಾವಕಾಶ ನೀಡುವಂತೆ ಸದಸ್ಯರು ಕೋರಿದ ಹಿನ್ನೆಲೆಯಲ್ಲಿ ವಿಷಯವನ್ನು ಮುಂದಿನ ಸಭೆಗೆ ಮುಂದೂಡಲಾಯಿತು.

**2022–ಸಿಂ–4.09(ಎ):** ದೂರ ಶಿಕ್ಷಣ ನಿರ್ದೇಶನಾಲಯಕ್ಕೆ ನಿರ್ದೇಶಕರನ್ನು ನೇಮಕ ಮಾಡುವ ಬಗ್ಗೆ ಹಾಗೂ ಸಂಪರ್ಕಾಧಿಕಾರಿಯ ಸಂಭಾವನೆ ಹೆಚ್ಚಳ ಮಾಡಿರುವುದನ್ನು ಸ್ಥಿರೀಕರಿಸುವ ಕುರಿತು.

ಚರ್ಚೆ: ಕುಲಸಚಿವರು ವಿಷಯ ಮಂಡಿಸಿ ಮಾತನಾಡಿ ವಿಶ್ವವಿದ್ಯಾಲಯದ ದೂರ ಶಿಕ್ಷಣ ನಿರ್ದೇಶನಾಲಯಕ್ಕೆ ನಿರ್ದೇಶಕರಾಗಿ ಡಾ. ಬಿ.ಎಸ್. ಬಿರಾದಾರ್ ಪ್ರಾಧ್ಯಾಪಕರು, ಸ್ನಾತಕೋತ್ತರ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗ ವಿಭಾಗ ಇವರನ್ನು ನೇಮಕ ಮಾಡಿ ಅಧಿಸೂಚನೆ ಹೊರಡಿಸಲಾಗಿತ್ತು. ಆದರೆ ಸದರಿಯವರು ವೈಯಕ್ತಿಕ ಕಾರಣಗಳಿಂದಾಗಿ ನಿರ್ದೇಶಕರ ಹುದ್ದೆಗೆ ರಾಜೀನಾಮೆ ನೀಡಿರುತ್ತಾರೆ ಆದ್ದರಿಂದ ದೂರ ಶಿಕ್ಷಣ ನಿರ್ದೇಶನಾಲಯಕ್ಕೆ ನಿರ್ದೇಶಕರನ್ನು ನೇಮಕ ಮಾಡುವ ಬಗ್ಗೆ ಚರ್ಚೆ ಹಾಗೂ ನಿರ್ಣಯಕ್ಕಾಗಿ ಮಂಡಿಸಿದೆ ಎಂದು ಹೇಳಿದರು.

ಸದಸ್ಯರಾದ ಶ್ರೀ ಧರ್ಮಪ್ರಸಾದ್‌ರವರು ಮಾತನಾಡಿ ಈಗ ಪರೀಕ್ಷೆಗಳನ್ನು ನಡೆಸಬೇಕು ಆದ್ದರಿಂದ ಇದೇ ಸಭೆಯಲ್ಲಿ ಕೂಡಲೇ ದೂರ ಶಿಕ್ಷಣ ನಿರ್ದೇಶನಾಲಯಕ್ಕೆ ನಿರ್ದೇಶಕರನ್ನು ನೇಮಕ ಮಾಡುವುದು ಒಳ್ಳೆಯದು ಎಂದು ಹೇಳಿದರು.

ಮಾನ್ಯ ಕುಲಪತಿಗಳು ಮಾತನಾಡಿ ನಾನು ಈಗಾಗಲೇ ಸಂಬಂಧಿಸಿದ ಕಡತದಲ್ಲಿ ಹೆಸರನ್ನು ಸೂಚಿಸಿದ್ದೇನೆ ಎಂದು ಹೇಳಿದರು.

ಸದಸ್ಯರಾದ ಶ್ರೀ ಹೆಚ್.ಬಿ. ರಮೇಶ್ ಬಾಬುರವರು ಮಾತನಾಡಿ ಯಾವುದೇ ಹುದ್ದೆ ಖಾಲಿ ಇರಬಾರದು ಸದ್ಯಕ್ಕೆ ಕುಲಸಚಿವ (ಪರೀಕ್ಷಾಂಗ)ರವರಿಗೇ ದೂರ ಶಿಕ್ಷಣ ನಿರ್ದೇಶಕರ ಪ್ರಭಾರವನ್ನು ವಹಿಸಬಹುದು ಎಂದು ಹೇಳಿದರು. ಸದಸ್ಯರಾದ ಶ್ರೀ ಬಳ್ಳೇಕೆರೆ ಸಂತೋಷ್ ಇದಕ್ಕೆ ಸಹಮತ ವ್ಯಕ್ತಪಡಿಸಿದರು. ಶ್ರೀ ಧರ್ಮಪ್ರಸಾದ್‌ರವರು ಇದನ್ನೇ ಅನುಮೋದಿಸಿ, ಈಗಿನ ಪರಿಸ್ಥಿತಿಯಲ್ಲಿ ಬೇರೆಯವರನ್ನು ನೇಮಕ ಮಾಡಿದರೆ ಕಷ್ಟ ಆಗುತ್ತದೆ. ಅವರು ಹೊಸದಾಗಿ ಪರಿಶೀಲಿಸಬೇಕಾಗುತ್ತದೆ ಆದ್ದರಿಂದ ಕುಲಸಚಿವ(ಪರೀಕ್ಷಾಂಗ)ರವರಿಗೇ ಜವಾಬ್ದಾರಿ ವಹಿಸಿದರೆ ಸರಿಯಾಗುತ್ತದೆ ಎಂದರು.

ಮಾನ್ಯ ಕುಲಪತಿಗಳು ಮಾತನಾಡಿ ನಾನು ಹೆಸರು ಸೂಚಿಸಿರುವ ವ್ಯಕ್ತಿಯು ಈಗಾಗಲೇ ಕೆ.ಎಸ್.ಓ.ಯು ನಲ್ಲಿ ಹಾಗೂ ಮೈಸೂರು ವಿಶ್ವವಿದ್ಯಾಲಯದಲ್ಲಿ ಕುಲಸಚಿವ(ಪರೀಕ್ಷಾಂಗ)ರಾಗಿ ಕರ್ತವ್ಯ ನಿರ್ವಹಿಸಿದ್ದಾರೆ ಅವರಿಗೆ ಅರ್ಹತೆ ಹಾಗೂ ಅನುಭವ ಇದೆ ಎಂದು ಹೇಳಿದರು.

ಸದಸ್ಯರಾದ ಶ್ರೀ ಜಿ. ಧರ್ಮಪ್ರಸಾದ್‌ರವರು ಮಾತನಾಡಿ ದೂರ ಶಿಕ್ಷಣ ನಿರ್ದೇಶನಾಲಯದಲ್ಲಿ ಯಾವುದೇ ಪ್ರವೇಶ ಪ್ರಕ್ರಿಯೆಗಳು ಇರುವುದಿಲ್ಲ ಪ್ರಸ್ತುತ ಪರೀಕ್ಷೆಗಳನ್ನು ಮಾತ್ರ ಮಾಡಬೇಕು,

ಆದ್ದರಿಂದ ಕುಲಸಚಿವ(ಪರೀಕ್ಷಾಂಗ)ರವರಿಗೇ ಜವಾಬ್ದಾರಿ ವಹಿಸಿದರೆ ಸಾಕಾಗುತ್ತದೆ, ನಂತರ ಪೂರ್ಣಕಾಲಿಕ ನಿರ್ದೇಶಕರನ್ನು ನೇಮಕ ಮಾಡುವ ಕುರಿತು ಕ್ರಮ ಕೈಗೊಳ್ಳಬಹುದು ಎಂದರು.

ಪ್ರಾದೇಶಿಕ ಜಂಟಿ ನಿರ್ದೇಶಕರಾದ ಡಾ. ಅಶೋಕ್ ಡಿ. ರೇವಣ್‌ಕರ್‌ರವರು ಮಾತನಾಡಿ ಈಗಿರುವ ನಿರ್ದೇಶಕರ ರಾಜೀನಾಮೆಯು ಅಂಗೀಕೃತಗೊಂಡಿದ್ದರೆ ಇನ್ನೊಬ್ಬ ಶಾಸನಬದ್ಧ ಅಧಿಕಾರಿಗೆ ಪ್ರಭಾರ ವಹಿಸಬಹುದು ಎಂದರು. ಆದರೆ ಮಾನ್ಯ ಕುಲಪತಿಗಳು ಇದಕ್ಕೆ ತಮ್ಮ ಒಪ್ಪಿಗೆಯಿಲ್ಲ ಎಂದು ಹೇಳಿದರು.

ಸದಸ್ಯರಾದ ಶ್ರೀ ಧರ್ಮಪ್ರಸಾದ್‌ರವರು ಮಾತನಾಡಿ ದೂರ ಶಿಕ್ಷಣ ಪರೀಕ್ಷೆಗಳು ಮುಗಿಯುವವರೆಗೆ ಕುಲಸಚಿವ (ಪರೀಕ್ಷಾಂಗ)ರವರಿಗೆ ಕಾರ್ಯಭಾರ ವಹಿಸಿ ನಂತರ ಸ್ವತಂತ್ರ ನಿರ್ದೇಶಕರನ್ನು ನೇಮಕ ಮಾಡಬಹುದು, ಸದರಿಯವರು ಪ್ರಭಾರ ವಹಿಸಿಕೊಂಡು 2019-20ನೇ ಸಾಲಿನ ಮೊದಲನೇ ಆವೃತ್ತಿ ಮತ್ತು ಎರಡನೇ ಆವೃತ್ತಿಯ ದ್ವಿತೀಯ ಮತ್ತು ತೃತೀಯ ವರ್ಷದ ವಿದ್ಯಾರ್ಥಿಗಳಿಗೆ ಪರೀಕ್ಷೆ ಮಾಡಬೇಕು. ತಾವು ಅಧ್ಯಕ್ಷರಾಗಿ ಒಬ್ಬರೇ ನಿರ್ಣಯ ತೆಗೆದುಕೊಳ್ಳಲು ಬರುವುದಿಲ್ಲ, ತಾವೇ ಅಧ್ಯಕ್ಷರಾಗಿ ಅಸಮ್ಮತಿ ಸೂಚಿಸುವುದೂ ಸರಿಯಲ್ಲ ಎಂದು ತಮ್ಮ ಅಭಿಪ್ರಾಯ ತಿಳಿಸಿದರು. ಸದಸ್ಯರಾದ ಶ್ರೀ ಸಂತೋಷ್ ಬಳ್ಳೇಕೆರೆ ಹಾಗೂ ಶ್ರೀ ರಮೇಶಬಾಬುರವರು ಇದನ್ನೇ ಅನುಮೋದಿಸಿದರು.

ಸದಸ್ಯರಾದ ಪ್ರೊ. ರಿಯಾಜ್ ಮಹಮೂದ್ ರವರು ಮಾತನಾಡಿ ದೂರ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಅರ್ಹತೆಯ ಆಧಾರದ ಮೇಲೆ ಆಯ್ಕೆ ಮಾಡುವುದು ಒಳ್ಳೆಯದು, ಈ ಎಲ್ಲಾ ಪ್ರಕ್ರಿಯೆಗಳು ಮುಗಿಯುವವರೆಗೂ ಯಾರಾದರೂ ಒಬ್ಬ ಅಧಿಕಾರಿಗೆ ದೂರ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರ ಜವಾಬ್ದಾರಿ ವಹಿಸಬಹುದು ಎಂದು ಹೇಳಿದರು. ಇದಕ್ಕೆ ಎಲ್ಲ ಸದಸ್ಯರೂ ಒಪ್ಪಿದರು.

ಮಾನ್ಯ ಕುಲಪತಿಗಳು ಪುನ: ಮಾತನಾಡಿ ಶಾಸನಬದ್ಧ ಅಧಿಕಾರಿಗಳಿಗೆ ಹೆಚ್ಚುವರಿ ಪ್ರಭಾರವನ್ನು ವಹಿಸುವುದನ್ನು ನಾನು ಒಪ್ಪುವುದಿಲ್ಲ ಎಂದು ಹೇಳಿದರು.

ಸದಸ್ಯರು ಈ ಹಿಂದೆ ಪ್ರೊ. ಎಸ್.ಎಸ್. ಪಾಟೀಲ್ ರವರು ಕುಲಸಚಿವರು(ಆಡಳಿತ) ಹುದ್ದೆಯಲ್ಲಿದ್ದಾಗ ದೂರಶಿಕ್ಷಣ ನಿರ್ದೇಶಕರ ಪ್ರಭಾರವನ್ನು ಹೆಚ್ಚುವರಿಯಾಗಿ ನಿರ್ವಹಿಸಿದ್ದರು ಎಂದು ಹೇಳಿದಾಗ ಮಾನ್ಯ ಕುಲಪತಿಗಳು ಮಾತನಾಡಿ ಹಾಗಾದರೆ ಕುಲಸಚಿವರು(ಆಡಳಿತ)ರವರು ಅಥವಾ ಪ್ರೊ. ರಿಯಾಜ್ ಮಹಮೂದ್‌ರವರು ದೂರಶಿಕ್ಷಣ ನಿರ್ದೇಶಕರ ಪ್ರಭಾರವನ್ನು ವಹಿಸಿಕೊಳ್ಳಲಿ ಎಂದು ಹೇಳಿದರು.

ಆದರೆ ಪ್ರೊ. ರಿಯಾಜ್ ಮಹಮೂದ್‌ರವರು ಮಾತನಾಡಿ ಅರ್ಜಿಗಳನ್ನು ಆಹ್ವಾನಿಸಿ ಅರ್ಹತೆಯ ಆಧಾರದ ಮೇಲೆ ದೂರ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರ ನೇಮಕಾತಿ ಮಾಡುವುದು ಒಳ್ಳೆಯ ಬೆಳವಣಿಗೆ, ಆದರೆ ತಾವು ದೂರಶಿಕ್ಷಣ ನಿರ್ದೇಶಕರ ಪ್ರಭಾರವನ್ನು ಹೆಚ್ಚುವರಿಯಾಗಿ ವಹಿಸಿಕೊಳ್ಳುವುದಿಲ್ಲ ಎಂದರು.

ಕುಲಸಚಿವರು ಕೂಡ ಕಾರ್ಯದೊತ್ತಡದ ಹಿನ್ನೆಲೆಯಲ್ಲಿ ದೂರ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರ ಪ್ರಭಾರವನ್ನು ಹೆಚ್ಚುವರಿಯಾಗಿ ವಹಿಸಿಕೊಳ್ಳಲು ಸಾಧ್ಯವಾಗುವುದಿಲ್ಲ ಎಂದು ಹೇಳಿದರು.

ಎಲ್ಲ ಸದಸ್ಯರೂ ಪುನ: ದೂರಶಿಕ್ಷಣ ನಿರ್ದೇಶಕರ ಪ್ರಭಾರವನ್ನು ಕುಲಸಚಿವ(ಪರೀಕ್ಷಾಂಗ)ರವರಿಗೇ ವಹಿಸುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು.

ನಿರ್ಣಯ: ಸುಧೀರ್ಘ ಚರ್ಚೆಯ ನಂತರ ಸಭೆಯಲ್ಲಿ ಭಾಗವಹಿಸಿದ ಹೆಚ್ಚಿನ ಸದಸ್ಯರು ಒಮ್ಮತ ಸೂಚಿಸಿದ್ದರಿಂದ ದೂರಶಿಕ್ಷಣ ನಿರ್ದೇಶಕರ ಪ್ರಭಾರವನ್ನು ಕುಲಸಚಿವ(ಪರೀಕ್ಷಾಂಗ)ರವರಿಗೇ ತಾತ್ಕಾಲಿಕವಾಗಿ ವಹಿಸಲು ನಿರ್ಣಯಿಸಲಾಯಿತು. ಹಾಗೂ ಕುವೆಂಪು ವಿಶ್ವವಿದ್ಯಾಲಯದ ಹಂತದಲ್ಲಿಯೇ ಅರ್ಜಿಗಳನ್ನು ಆಹ್ವಾನಿಸಿ ದೂರ ಶಿಕ್ಷಣ ನಿರ್ದೇಶಕರ ನೇಮಕಾತಿ ಮಾಡಲು ನಿರ್ಣಯಿಸಲಾಯಿತು. ಹಾಗೂ ದೂರ ಶಿಕ್ಷಣ ನಿರ್ದೇಶನಾಲಯದ ಸಂಪರ್ಕಾಧಿಕಾರಿಯ ಸಂಭಾವನೆ ಹೆಚ್ಚಳ ಮಾಡಿರುವುದನ್ನು ಸ್ಥಿರೀಕರಿಸಲಾಯಿತು.

## ಪರೀಕ್ಷಾ ವಿಭಾಗ

**2022-ಸಿಂ-4.10:** ಇ-ಟೆಂಡರ್ ಮೂಲಕ ಪಡೆಯಲಾದ ಬಾಡಿಗೆ ವಾಹನಗಳ ಕರಾರು ಅವಧಿಯನ್ನು ಮೂರು ತಿಂಗಳ ಅವಧಿಗೆ ಮುಂದುವರೆಸುವ ಕುರಿತು.

ನಿರ್ಣಯ: ಚರ್ಚೆಯ ನಂತರ ಸ್ನಾತಕ/ಸ್ನಾತಕೋತ್ತರ ಪರೀಕ್ಷಾ ಕಾರ್ಯಗಳಿಗೆ ಬಾಡಿಗೆ ವಾಹನಗಳನ್ನು ಒದಗಿಸಲು ಶ್ರೀ ಪುನಿತ್ ಎನ್.ವಿ. ಮೆ: ಸಿದ್ಧಿ ವಿನಾಯಕ ಟ್ರಾವೆಲ್ಸ್, ಹೊಸಮನೆ, ಶಿವಮೊಗ್ಗ ಇವರೊಂದಿಗೆ ಮುಂದಿನ ಮೂರು ತಿಂಗಳ ಅವಧಿಗೆ ಕರಾರು ಒಪ್ಪಂದವನ್ನು ಮುಂದುವರೆಸಲಾಗಿರುವ ಕ್ರಮವನ್ನು ಸಭೆಯು ಸ್ಥಿರೀಕರಿಸಿತು.

**2022-ಸಿಂ-4.10(ಎ):** 31 ಮತ್ತು 32ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಪ್ರದಾನ ಮಾಡುವ "ಸ್ವರ್ಣಪದಕ" ಗಳನ್ನು ಮೆ. ನವೀನ್ ಎಂಟರ್ ಪ್ರೈಸಸ್, ಬೆಂಗಳೂರು ಇವರಿಂದ ಖರೀದಿಸುವ ಕುರಿತು.

ನಿರ್ಣಯ: 31ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಪ್ರದಾನ ಮಾಡಲು ಸ್ವರ್ಣ ಪದಕಗಳನ್ನು ಸಿದ್ಧಪಡಿಸಿ ಸರಬರಾಜು ಮಾಡಲು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಕರಾರು ಒಪ್ಪಂದ ಮಾಡಿಕೊಳ್ಳಲಾದ ಮೆ. ನವೀನ್ ಎಂಟರ್ ಪ್ರೈಸರ್ಸ್ ಬೆಂಗಳೂರು- ಇವರಿಂದಲೇ ಈಗಾಗಲೇ ಮಾಡಿಕೊಳ್ಳಲಾದ ಕರಾರು ಒಪ್ಪಂದದ ದರಗಳನ್ವಯ 31 ಮತ್ತು 32ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಪ್ರಧಾನ ಮಾಡಬೇಕಾದ ಸ್ವರ್ಣಪದಕಗಳನ್ನು ಖರೀದಿಸಲು ಸಭೆಯು ಅನುಮೋದನೆ ನೀಡಿತು.

**2022-ಸಿಂ-4.10(ಬಿ):** ರೆಗ್ಯೂಲರ್ ಮತ್ತು ದೂರಶಿಕ್ಷಣದ ವಿವಧ ಸ್ನಾತಕ/ ಸ್ನಾತಕೋತ್ತರ ಪರೀಕ್ಷೆಗಳಿಗೆ ಸಂಬಂಧಿಸಿದ ಶುಲ್ಕಗಳನ್ನು ಪರಿಷ್ಕರಿಸುವ ಕುರಿತು.

ನಿರ್ಣಯ: ರೆಗ್ಯೂಲರ್ ಮತ್ತು ದೂರಶಿಕ್ಷಣದ ವಿವಿಧ ಸ್ನಾತಕ/ ಸ್ನಾತಕೋತ್ತರ ಪರೀಕ್ಷೆಗಳಿಗೆ ಸಂಬಂಧಿಸಿದ ಶುಲ್ಕಗಳನ್ನು ಶೇ. 10ರಷ್ಟು ಹೆಚ್ಚಳ ಮಾಡಲು ಸಭೆಯು ಅನುಮತಿ ನೀಡಿತು.

**2022-ಸಿಂ-4.10:** ಸದಸ್ಯರುಗಳು ಮಂಡಿಸಿರುವ ಪ್ರಸ್ತಾವನೆಗಳು: ಯಾವುದೂ ಇರುವುದಿಲ್ಲ

**2022-ಸಿಂ-4.11: ಸರ್ಕಾರದಿಂದ ಬಂದ ಪತ್ರಗಳು/ರಹಸ್ಯ ವರದಿಗಳ ಮಂಡನೆ: ಯಾವುದೂ ಇರುವುದಿಲ್ಲ.**

1. **ದೂರಶಿಕ್ಷಣ ನಿರ್ದೇಶನಾಲಯದ 2019-20ನೇ ಸಾಲಿನ ವಿದ್ಯಾರ್ಥಿಗಳ ಫಲಿತಾಂಶ ಪ್ರಕಟಿಸುವ ಕುರಿತು.**
   ಕುಲಸಚಿವರು ವಿಷಯ ಮಂಡಿಸಿ ಮಾತನಾಡಿ 2019-20ನೇ ಸಾಲಿನಲ್ಲಿ ಪ್ರವೇಶ ಪಡೆದ ದೂರ ಶಿಕ್ಷಣದ ವಿದ್ಯಾರ್ಥಿಗಳನ್ನು ಪರೀಕ್ಷೆ ಇಲ್ಲದೇ ಮುಂದಿನ ವರ್ಷಕ್ಕೆ ಪ್ರಮೋಟ್ ಮಾಡಿರುವ ನಿರ್ಣಯುವನ್ನು ಹಿಂಪಡೆದು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪರೀಕ್ಷೆ ನಡೆಸಿ ಫಲಿತಾಂಶ ಪ್ರಕಟಿಸಲು

ಕೈಗೊಂಡಿರುವ ಸಿಂಡಿಕೇಟ್ ನಿರ್ಣಯವನ್ನು ಮಾನ್ಯ ಉಚ್ಚ ನ್ಯಾಯಾಲಯವು ರದ್ದುಪಡಿಸಿರುವ ಕ್ರಮವನ್ನು ಸಭೆಯ ಗಮನಕ್ಕೆ ತಂದರು. ಮಾನ್ಯ ಉಚ್ಚ ನ್ಯಾಯಾಲಯದಿಂದ ಆದೇಶದ ಪ್ರತಿ ಇನ್ನೂ ಸ್ವೀಕೃತವಾಗಿಲ್ಲವೆಂದು ಹಾಗೂ ನ್ಯಾಯಾಲಯವು ಪರೀಕ್ಷೆ ನಡೆಸಿ ಫಲಿತಾಂಶವನ್ನು ಪ್ರಕಟಿಸಲು ಕೈಗೊಂಡಿರುವ ಸಿಂಡಿಕೇಟ್ ನಿರ್ಣಯವನ್ನು ರದ್ದುಪಡಿಸಿದ್ದು, ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕ್ರಮಕೈಗೊಳ್ಳಬೇಕೆಂದು ತಿಳಿಸಿರುವುದನ್ನು ಸಭೆಯ ಗಮನಕ್ಕೆ ತಂದರು. ಹಾಗೂ ಈ ಆದೇಶದ ಮೇಲೆ ಡಬಲ್ ಬೆಂಚ್‌ಗೆ ಕುವೆಂಪು ವಿಶ್ವವಿದ್ಯಾಲಯವು ಮೇಲ್ಮನವಿ ಹೋಗುವ ಅವಕಾಶವಿದ್ದು ಈ ಕುರಿತು ನಿರ್ಣಯಿಸಬೇಕಾಗಿದೆ ಎಂಬ ಅಂಶವನ್ನು ಸಭೆಯ ಗಮನಕ್ಕೆ ತಂದರು ಹಾಗೂ ಮುಂದೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ಸಭೆಯ ನಿರ್ದೇಶನ ಕೋರಿದರು.

ಕುಲಸಚಿವ(ಪರೀಕ್ಷಾಂಗ)ರವರು ಮಾತನಾಡಿ ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪಿನ ಹಿನ್ನೆಲೆಯಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಪ್ರಮೋಟ್ ಮಾಡಬೇಕು, 2019–20ನೇ ಸಾಲಿನ ಜನವರಿಯಲ್ಲಿ ಪ್ರವೇಶ ಪಡೆದ ಪ್ರಥಮ ಆವೃತ್ತಿಯ ವಿದ್ಯಾರ್ಥಿಗಳಿಗೆ ದ್ವಿತೀಯ ಮತ್ತು ತೃತೀಯ ವರ್ಷದ ಪರೀಕ್ಷೆ ಮಾಡಬೇಕು ಒಂದೇ ವರ್ಷದಲ್ಲಿ ಮಾಡಬೇಕಾಗಿರುವುದರಿಂದ ನಿಯಮಾವಳಿಗಳಲ್ಲಿ ಮಾರ್ಪಾಡು ಮಾಡಬೇಕು, ಹಾಗೂ ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಸಂಪರ್ಕ ತರಗತಿಗಳನ್ನು ನಡೆಸಬೇಕು ಎಂದು ಹೇಳಿದರು.

ಸದಸ್ಯರಾದ ಪ್ರೊ. ರಿಯಾಜ್ ಮಹಮೂದ್‌ರವರು ಮಾತನಾಡಿ ನಿಯಮಾವಳಿಗಳಲ್ಲಿ ಕೆಲವೊಂದು ಮಾರ್ಪಾಡು ಮಾಡಿಕೊಂಡು ವಿದ್ಯಾವಿಷಯಕ ಪರಿಷತ್ ಸಭೆಗೆ ಮಂಡಿಸಿ ಪರೀಕ್ಷೆಗಳನ್ನು ನಡೆಸಬಹುದು ಎಂದು ಹೇಳಿದರು. ಕುಲಸಚಿವ(ಪರೀಕ್ಷಾಂಗ)ರವರು ಮಾತನಾಡಿ ಮುಂದೆ ನೇಮಕವಾಗುವ ದೂರ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರು ಈ ಬಗ್ಗೆ ಗಮನವಹಿಸಬೇಕು ಎಂದರು.

ಸದಸ್ಯರಾದ ಶ್ರೀ ಧರ್ಮಪ್ರಸಾದ್ ಇವರು ಮಾತನಾಡಿ ಪ್ರಸ್ತುತ ಉಚ್ಚನ್ಯಾಯಾಲಯವು ನೀಡಿರುವ ತೀರ್ಪನ್ನು ಪಾಲನೆ ಮಾಡಬೇಕು, ಅದರಂತೆ ಪ್ರಥಮ ವರ್ಷದ ವಿದ್ಯಾರ್ಥಿಗಳನ್ನು ಪ್ರಮೋಟ್ ಮಾಡಬಹುದು, ಉಳಿದಂತೆ ದ್ವಿತಿಯ ಮತ್ತು ತೃತೀಯ ವರ್ಷದ ವಿದ್ಯಾರ್ಥಿಗಳಿಗೆ ಪರೀಕ್ಷೆ ಮಾಡಬೇಕು ಅದಕ್ಕೆ ಸಂಬಂಧಿಸಿದಂತೆ ನಿಯಮಗಳಲ್ಲಿ ತಿದ್ದುಪಡಿಯಾಗಬೇಕಾಗಿದ್ದರೆ ಅತೀ ಶೀಘ್ರವಾಗಿ ಈ ಬಗ್ಗೆ ಗಮನ ವಹಿಸಿ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಮುಂದುವರೆದು ಮಾತನಾಡಿ, ಪ್ರಸ್ತುತ ಸುಮಾರು ಹದಿನಾಲ್ಕು ಸಾವಿರದ ವಿದ್ಯಾರ್ಥಿಗಳಿಗೆ ಪರೀಕ್ಷೆ ಮಾಡಬೇಕು ಈ ಸಂಬಂಧ ತಕ್ಷಣ ಅಧಿಸೂಚನೆ ಹೊರಡಿಸಬೇಕು. ಪರೀಕ್ಷಾ ವಿಭಾಗ ಹಾಗೂ ದೂರ ಶಿಕ್ಷಣ ವಿಭಾಗದವರು ಪರಸ್ಪರ ಹೊಂದಾಣಿಕೆಯಿಂದ ಕೆಲಸ ಮಾಡಬೇಕಾಗಿರುತ್ತದೆ. ಸಂಪರ್ಕ ತರಗತಿಗಳನ್ನು ಏಳು ದಿನಗಳಿಗೆ ಸೀಮಿತಗೊಳಿಸಿ ಉಳಿದ ಏಳು ದಿನಗಳ ತರಗತಿಗಳಿಗೆ ಆನ್‌ಲೈನ್ ತರಗತಿ / ಮುದ್ರಿತ ನೋಟ್ಸ್‌ಗಳನ್ನು ನೀಡಬಹುದು. ಬೋಧನಾ ಮತ್ತು ಸಂಶೋಧನಾ ಸಹಾಯಕರಿಂದ (ಆರ್.ಟಿ.ಎ) ಸಂಪರ್ಕ ತರಗತಿಗಳನ್ನು ಮಾಡಿಸಬಹುದು. 2019–20ರ ಪ್ರಥಮ ಆವೃತಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳ ದ್ವಿತಿಯ ವರ್ಷದ ಪರೀಕ್ಷಾ ವೇಳಾಪಟ್ಟಿಯನ್ನು ಜುಲೈ ಮಾಹೆಯೊಳಗೆ ಮುಗಿಯುವಂತೆ ತಕ್ಷಣ ಪ್ರಕಟಿಸಬೇಕು, ಹಾಗೂ ತೃತೀಯ ವರ್ಷದ ಪರೀಕ್ಷೆಗಳು 2022ರ ಸೆಪ್ಟೆಂಬರ್ ಮಾಹೆಯೊಳಗೆ ಮುಗಿಯುವಂತೆ ವೇಳಪಟ್ಟಿ ನಿಗದಿಪಡಿಸಬೇಕು ಅದಕ್ಕೆ ತಕ್ಕಂತೆ ನಿಯಮಾವಳಿಗಳಲ್ಲಿ ತಿದ್ದುಪಡಿಮಾಡಬೇಕು. 2019–20ರ ದ್ವಿತಿಯ ಆವೃತಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಯಾವುದೇ ಗೊಂದಲವಿಲ್ಲ ಈಗ ದ್ವಿತಿಯ ವರ್ಷದ ಪರೀಕ್ಷೆ ಮಾಡಿ 2023ರ ಮಾರ್ಚ್ ಮಾಹೆಯೊಳಗೆ ತೃತೀಯ ವರ್ಷದ ಪರೀಕ್ಷೆಗಳನ್ನು ಮಾಡಬೇಕಾಗಿರುತ್ತದೆ ಎಂದು ಹೇಳಿದರು.

ಮೇಲ್ಕಂಡ ಹೇಳಿಕೆಗೆ ಎಲ್ಲಾ ಸದಸ್ಯರು ತಮ್ಮ ಸಹಮತ ವ್ಯಕ್ತಪಡಿಸಿದರು.

ನಿರ್ಣಯ: ಸುಧೀರ್ಘ ಚರ್ಚೆಯ ನಂತರ ಮಾನ್ಯ ನ್ಯಾಯಾಲಯದ ತೀರ್ಪಿನ ಆದೇಶದ ಪ್ರತಿಯು ಲಭ್ಯವಾದ ಕೂಡಲೇ 2019–20ನೇ ಸಾಲಿನ ಪ್ರಥಮ ಮತ್ತು ದ್ವಿತೀಯ ಆವೃತ್ತಿಯ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಪ್ರಮೋಟ್ ಮಾಡಲು ಹಾಗೂ ದ್ವಿತಿಯ ಮತ್ತು ತೃತೀಯ ವರ್ಷದ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಆದಷ್ಟು ಶೀಘ್ರವಾಗಿ ಪರೀಕ್ಷೆ ನಡೆಸಲು ಕ್ರಮಕೈಗೊಳ್ಳಬೇಕೆಂದು ನಿರ್ಣಯಿಸಲಾಯಿತು.

**2022–ಸಿಂ–4.12 : ಅಧ್ಯಕ್ಷರ ಅಪ್ಪಣೆಯ ಮೇರೆಗೆ ಇತರೆ ವಿಷಯಗಳು :**

ಚರ್ಚೆ: 1. ಸದಸ್ಯರಾದ ಪ್ರೊ. ರಿಯಾಜ್ ಮಹಮೂದ್‌ರವರು ಮಾತನಾಡಿ ಪೋಸ್ಟ್ ಡಾಕ್ಟೋರಲ್ ಫೆಲೋ ರವರ ಸೇವೆಯನ್ನು ಸಹ ಅತಿಥಿ ಉಪನ್ಯಾಸಕರ ಸೇವೆಯೆಂದು ಪರಿಗಣಿಸಬೇಕು ಹಾಗೂ ಘಟಕ ಕಾಲೇಜುಗಳು ಮತ್ತು ಸ್ನಾತಕೋತ್ತರ ಕೇಂದ್ರ ಕಡೂರಿನಲ್ಲಿ ಸೇವೆ ಸಲ್ಲಿಸಿದ ಅತಿಥಿ ಉಪನ್ಯಾಸಕರ ಸೇವೆಯನ್ನು ಅತಿಥಿ ಉಪನ್ಯಾಸಕರ ಒಟ್ಟು ಸೇವೆಗೆ ಪರಿಗಣಿಸಬೇಕೆಂದು ಕೋರಿದರು.

ನಿರ್ಣಯ: ಚರ್ಚೆಯ ನಂತರ ಸಭೆಯು ಅನುಮೋದನೆ ನೀಡಿತು.

2. ಸದಸ್ಯರಾದ ಶ್ರೀ ಹೆಚ್. ಬಿ. ರಮೇಶಬಾಬುರವರು ಮಾತನಾಡಿ ಸ್ನಾತಕೋತ್ತರ ಕೇಂದ್ರ ಕಡೂರಿನಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಗ್ರಂಥಾಲಯ ಸಹಾಯಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಸಂಪತ್ ಕುಮಾರ ಇವರಿಗೆ ಸಂಚಿತ ವೇತನ ನೀಡಬೇಕೆಂದು ಹಿಂದಿನ ಸಭೆಯಲ್ಲಿ ನಿರ್ಣಯವಾಗಿತ್ತು ಆದರೆ ಜಾರಿಗೆ ಬಂದಿರುವುದಿಲ್ಲ ಎಂದು ಹೇಳಿದರು.

ಕುಲಸಚಿವರು ಮಾತನಾಡಿ ಸದರಿಯವರು ಹೊರಗುತ್ತಿಗೆ ನೌಕರರಾಗಿರುತ್ತಾರೆ. ಈ ಹಿಂದೆ ಅಗತ್ಯ ಸೇವೆಯೆಂದು ಕೆಲವು ನೌಕರರನ್ನು ಸಂಚಿತ ವೇತನದಡಿ ನೇಮಕಾತಿ ಮಾಡಿಕೊಂಡಿರುವುದಕ್ಕೆ ಮಹಾಲೇಖಪಾಲರ ಮತ್ತು ರಾಜ್ಯ ಲೆಕ್ಕ ಪರಿಶೋಧನೆಯಲ್ಲಿ ಆಕ್ಷೇಪಣೆಯಾಗಿರುತ್ತದೆ ಹಾಗೂ ಹೊರಗುತ್ತಿಗೆ ಮೂಲಕ ಯಾವುದೇ ನೇಮಕಾತಿ ಮಾಡಿಕೊಳ್ಳುವಂತಿಲ್ಲ ಎಂದು ಸರ್ಕಾರದಿಂದ ಪತ್ರ ಬಂದಿರುತ್ತದೆ ಎಂದು ಸದಸ್ಯರ ಗಮನಕ್ಕೆ ತಂದರು.

ನಿರ್ಣಯ: ಚರ್ಚೆಯ ನಂತರ ಸಭೆಯು ಒಪ್ಪಿತು.

3. ಸದಸ್ಯರಾದ ಶ್ರೀ ಜಿ. ಧರ್ಮಪ್ರಸಾದ್‌ರವರು ಮಾತನಾಡಿ ಈ ಹಿಂದಿನ ಸಭೆಗಳಲ್ಲಿ ತೆಗೆದುಕೊಂಡ ನಿರ್ಣಯದಂತೆ Self finance Course ಗಳನ್ನು ಮುಂದಿನ ಪ್ರವೇಶದ ಅಧಿಸೂಚನೆ ಹೊರಡಿಸುವ ಸಂದರ್ಭದಲ್ಲಿ ಅಳವಡಿಸಿ ಜಾರಿಗೆ ತರಬೇಕು ಇದರಿಂದ ವಿಶ್ವವಿದ್ಯಾಲಯಕ್ಕೆ ಹೆಚ್ಚಿನ ಆದಾಯ ಬರುತ್ತದೆ ಎಂದು ಹೇಳಿದರು.

ನಿರ್ಣಯ: ಚರ್ಚೆಯ ನಂತರ ಮುಂದಿನ ಪ್ರವೇಶ ಸಂದರ್ಭದಲ್ಲಿ Self finance Course ಗಳನ್ನು ಜಾರಿಗೆ ತರಲು ನಿರ್ಣಸಲಾಯಿತು.

4. ಸದಸ್ಯರಾದ ಶ್ರೀ ಜಿ. ಧರ್ಮಪ್ರಸಾದ್‌ರವರು ಮಾತನಾಡಿ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿದ್ದು ವಿಶ್ವವಿದ್ಯಾಲಯದ ಆವರಣದ ಹೊರಗಡೆ ವಾಸವಿರುವ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯದ ಹಾಸ್ಟೆಲ್‌ಗಳಲ್ಲಿ ಊಟದ ಕೂಪನ್‌ಗಳನ್ನು ಮಾಡಿ ಊಟ ಒದಗಿಸಬಹುದು ಇದರಿಂದ ವಿಶ್ವವಿದ್ಯಾಲಯಕ್ಕೆ ಆದಾಯ ಬರುತ್ತದೆ ಎಂದು ಹೇಳಿದರು.

ನಿರ್ಣಯ: ಚರ್ಚೆಯ ನಂತರ ಸಭೆಯು ಅನುಮೋದಿಸಿತು.

ಅಂತಿಮವಾಗಿ ಸಭೆಗೆ ಆಗಮಿಸಿ ಸೂಕ್ತ ಸಲಹೆ, ಸಹಕಾರ ನೀಡಿದ ಎಲ್ಲಾ ಸದಸ್ಯರುಗಳಿಗೆ ಕುಲಸಚಿವರು ಹೃತ್ಪೂರ್ವಕವಾಗಿ ವಂದಿಸಿದ ನಂತರ ಸಭೆಯ ಕಲಾಪಗಳು ಮುಕ್ತಾಯವಾದವು.

ಸಹಿ/–

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.

ಕುಲಪತಿಗಳು